ಸಂಪುಟ : 10 ಸಂಚಿಕೆ: 40 ಪುಟ : 4+2 ಬೆಲೆ: 3.00 ಬುಧವಾರ ಮಾರ್ಚ್ 12 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 40 Pages : 4+2 Price : 3.00 Wednesday March 12 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಯುವ ಕಾಂಗ್ರೆಸ್ ಸಮಿತಿ ಪೂರ್ವಭಾವಿ ಸಭೆ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ



ಮಾರ್ಚ್ 17ರಂದು ಬೆಂಗಳೂರಿನ ಅರಮನೆ ಮೈದಾನದಲ್ಲಿ ಹಮ್ಮಿಕೊಂಡಿರುವ ಕರ್ನಾಟಕ ಪ್ರದೇಶ ಯುವ ಕಾಂಗ್ರೆಸ್ ಸಮಿತಿ ನೂತನ ರಾಜ್ಯಾಧ್ಯಕ್ಷ ಎಚ್.ಎಸ್. ಮಂಜುನಾಥ್ ಅವರ ಪದಗ್ರಹಣ ಕಾರ್ಯಕ್ರಮದ ಅಂಗವಾಗಿ ನಗರದ ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಗದಗ ಜಿಲ್ಲಾ ಯುವ ಕಾಂಗ್ರೆಸ್ ಸಮಿತಿ ವತಿಯಿಂದ ಮಾ.12ರಂದು ಸಂಜೆ 5ಕ್ಕೆ ಪೂರ್ವಭಾವಿ ಸಭೆ ಹಮ್ಮಿಕೊಂಡಿದೆ.ಗದಗ ಜಿಲ್ಲಾ ಯುವ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಕೃಷ್ಣಗೌಡ ಎಚ್.ಪಾಟೀಲ ಸಭೆಯ ಅಧ್ಯಕ್ಷತೆ ವಹಿಸಲಿದ್ದಾರೆ. ಬೆಂಗಳೂರಿನ ಅರಮನೆ ಮೈದಾನದಲ್ಲಿ ನಡೆಯುವ ಪದಗ್ರಹಣ ಕಾರ್ಯಕ್ರಮದಲ್ಲಿ ಭಾಗವಹಿಸಲು ರೂಪುರೇಷೆ ಹಾಕಿಕೊಳ್ಳುವುದರ ಕುರಿತು ಚರ್ಚಿಸಲಾಗುವುದು. ಆದ್ದರಿಂದ ಜಿಲ್ಲೆಯ ಯುವ ಕಾಂಗ್ರೆಸ್ ಪದಾಧಿಕಾರಿಗಳು, ಕಾರ್ಯಕರ್ತರು ಪೂರ್ವಭಾವಿ ಸಭೆಯಲ್ಲಿ ಪಾಲ್ಗೊಳ್ಳಬೇಕು ಎಂದು ಗದಗ ಜಿಲ್ಲಾ ಯುವ ಕಾಂಗ್ರೆಸ್ ಸಮಿತಿ ಮಾಜಿ ಅಧ್ಯಕ್ಷ ಹಾಗೂ ಗದಗ ತಾಲೂಕು ಗ್ಯಾರಂಟಿ ಯೋಜನೆ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಅಶೋಕ ಮಂದಾಲಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಇಂದಿನ ನೀರು ಪೂರೈಕೆ ವಿವರ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರದಲ್ಲಿ ಮಾರ್ಚ್: 12 ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.

ಸ್ಥಳಗಳ ವಿವರ: ವಾರ್ಡ್ ನಂ. 23, 21ರಲ್ಲಿ ಮಾನ್ವಿ ಅವರ ಲೈನ್, ಅಕ್ಕಿ ಪ್ಲಾಟ್, ಬಾಳಿಕಾಯಿ ಅವರ ಲೈನ್, ಮುನವಳ್ಳಿ ಲೈನ್, ಸ್ಮಶಾನ ಗಟ್ಟಿ ಲೈನ್, ರಾಚೋಟೇಶ್ವರ ಗುಡಿ ಲೈನ್, ನಾಗಪ್ಪನಕಟ್ಟಿ ಲೈನ್, ಶರಣಪ್ಪ, ಪಾಟೀಲರ ಲೈನ್, ಲಕ್ಕುಂಡಿ ಅವರ ಲೈನ್ ಉಳಿದ ಕೆಲವು ಭಾಗಗಳು, ವಾರ್ಡ್ ನಂ. 34, ಸೇವಾಲಾಲ್ ನಗರ, ಕರಿಜೋಳಮಠ ಲೈನ್, ಗರಗದವರ ಲೈನ್, ಮುಂಡರಗಿ ಲೇಔಟ್, ವಾರ್ಡ್ ನಂ. 35 ರಲ್ಲಿ ಬಾಪೂಜಿ ನಗರ, ಕೆ.ಇ.ಬಿ. ಲೇಔಟ್, ಲಕ್ಷ್ಮಣಸಾ ನಗರ, ಇಮಾಮ್ ಹುಸೇನ್ ಕಾಲೋನಿ, ಉಳಿದ ಭಾಗಗಳು,

ವಾರ್ಡ್ ನಂ. 7ರಲ್ಲಿ ಪುಲಿಕೇಶಿ ರಸ್ತೆ, ಬಾರಕೇರ, ಕಿಲ್ಲಾ ಓಣಿ, ಬಾಗಲಕೋಟಿಯವರ ಹಳೇ ಪೋಸ್ಟ್ ಆಫೀಸ್, ಪಟ್ಟಣಶೆಟ್ಟರ ಹುಚ್ಚನಗೌಡ್ರ ಓಣಿ, ವಾಲ್ಮೀಕಿ ನಗರ ಗ್ವಾಡಿಯವರ ಲೈನ್, ಕೆಲವು ಉಳಿದ ಭಾಗಗಳು, ವಾರ್ಡ್ ನಂ. 22, 21, ಕರುಗಲ್ ಲೇಔಟ್, ವಿಜಯನಗರ ಶಾಲೆ, ಶಿಗ್ಗಾಂವಿ ಲೇಔಟ್, ಕಮತರ ಪ್ಲಾಟ್, ಟವರ್ ಕಂಬ, ವಾಲ್ಮೀಕಿ ಭವನ, ಗಾರ್ಡನ್ ಲೈನ್, ಕೆಲವು ಉಳಿದ ಭಾಗಗಳು, ವಾರ್ಡ್ ನಂ. 16, ಡಿ.ಸಿ.ಮಿಲ್, ಡೋರಗಲ್ಲಿ ಉಳಿದ ಭಾಗಗಳು, ತುಂಗಭದ್ರಾ ನದಿಯಿಂದ ಸರಬರಾಜು ಆಗುತ್ತಿರುವ ನೀರನ್ನು ಕಾಯಿಸಿ ಆರಿಸಿ ಕುಡಿಯಲು ನಿರ್ದೇಶನ ನೀಡಲಾಗಿದೆ ಹಾಗೂ ತಮಗೆ ನೀರು ಸಾಕಾದಾಗ ತಮ್ಮ ತಮ್ಮ ನೀರಿನ ನಳಗಳನ್ನು ಬಂದ್ ಮಾಡುವ ಮೂಲಕ ನೀರು ಪೋಲಾಗದಂತೆ ತಡೆಯುವಲ್ಲಿ ಮುತುವರ್ಜಿ ವಹಿಸಬೇಕೆಂದು ಹಾಗೂ ತಮ್ಮ ನೀರಿನ ಕರ ಪಾವತಿಸುವಲ್ಲಿ ತಾವು ವಿಳಂಬ ಮಾಡದೇ ತಮ್ಮ ಬಾಕಿ ಇರುವ ನೀರಿನ ಕರವನ್ನು ನಗರಸಭೆಗೆ ಪಾವತಿಸಬೇಕೆಂದು ತಿಳಿಸಿರುತ್ತಾರೆ. ಒಂದು ವೇಳೆ ಈ ರೀತಿ ಮಾಡದೇ ಹೋದ ಸಂದರ್ಭದಲ್ಲಿ ತಮಗೆ ದಂಡ ವಿಧಿಸಿ ತಮ್ಮ ನೀರಿನ ನಳವನ್ನು ಬಂದ್ ಮಾಡಲಾಗುವುದು ಎಂದು ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಇಡೀ ದೇಶದ ಗಮನ ಸೆಳೆದಿದ್ದ ಲಕ್ಷ್ಮೇಶ್ವರದ ಪ್ರಕರಣ । ಕೊನೆಗೂ ಸಾಬೀತಾದ ಆರೋಪ

# ನ್ಯಾಯಾಲಯದ ಆದೇಶದತ್ತ ಕುತೂಹಲ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಮಾಡಿದ ತಪ್ಪನ್ನು ಒಪ್ಪಿಕೊಂಡು ನ್ಯಾಯಾಲಯ ನೀಡಿದ ಶಿಕ್ಷೆಯನ್ನು ಅನುಭವಿಸಲು ಮುಂದಾಗಿದ್ದರೂ ಆ ಅಪರಾಧಿಗಳಿಗೆ ಇಂತದೊಂದು ಪರಿಸ್ಥಿತಿ ಎದುರಾಗುತ್ತಿರಲಿಲ್ಲವೇನೋ. ಆದರೆ, ಅಲ್ಲಿ ನಡೆದಿದ್ದೇ ಬೇರೆ. ಅವರೆಲ್ಲರೂ ಮರಳು ದಂಧೆಕೋರರು ಹಾಗೂ ಅವರ ಬೆಂಬಲಿಗರು. ನೂರಾರು ಜನ ಏಕಾಏಕಿ ಪೊಲೀಸ್ ಠಾಣೆಗೆ ಪ್ರವೇಶಿಸಿ ಬೆಂಕಿಯಿಟ್ಟರು. ಮಹತ್ವದ ದಾಖಲೆಗಳನ್ನು ಸುಟ್ಟು ಬೂದಿ ಮಾಡಿದರು. ಇನ್ನೂ ಆಕ್ರೋಶ ತಣಿಯದಿದ್ದಾಗ ಠಾಣೆಯ ಹೊರಗಿದ್ದ ಪೊಲೀಸ್ ವಾಹನಕ್ಕೆ ಹಾಗೂ ದ್ವಿಚಕ್ರ ವಾಹನಗಳಿಗೂ ಬೆಂಕಿ ಹೊತ್ತಿಸಿ ಬೂದಿಯಾಗಿಸಿದರು.

2017 ಫೆಬ್ರವರಿ 5ರಂದು ಗದಗ ಜಿಲ್ಲೆಯ ಲಕ್ಷ್ಮೇಶ್ವರ ಪಟ್ಟಣದಲ್ಲಿ ನಡೆದ ಈ ಘಟನೆ ದೇಶಾದ್ಯಂತ ಸುದ್ದಿಯಾಗಿತ್ತು. ಸಿಟ್ಟಿನ ಅಬ್ಬರದಲ್ಲಿ ಅಪರಾಧವೆಸಗಿ ಅಟ್ಟಹಾಸ ಮೆರೆದವರ ಆರೋಪಗಳೆಲ್ಲವೂ ನ್ಯಾಯಾಲಯದ ವಿಚಾರಣೆಯಲ್ಲಿ ಸಾಬೀತಾಗಿದ್ದು, ವಿಚಾರಣೆ ಎದುರಿಸುತ್ತಿದ್ದ 112 ಜನರ ಪೈಕಿ 23 ಜನರ ಅಪರಾಧ ಸಾಬೀತಾಗಿದೆ. ಇದೇ ಮಾರ್ಚ್ 24ರಂದು ಗದಗ ಕೋರ್ಟ್‌ನಲ್ಲಿ ಶಿಕ್ಷೆಯೂ ಪ್ರಕಟವಾಗಲಿದೆ.






ಆ ದಿನ ಅಕ್ರಮ ಮರಳು ಸಾಗಿಸುವ ವಾಹನ ತಡೆದು ಚಾಲಕ, ಲಕ್ಷ್ಮೇಶ್ವರ ತಾಲೂಕಿನ ಬಟ್ಟೂರು ಗ್ರಾಮದ ನಿವಾಸಿ ಶಿವಪ್ಪ ಡೋಣಿ ಎಂಬಾತನಿಗೆ ಪೊಲೀಸರು ಮನಬಂದಂತೆ ಥಳಿಸಿದ್ದರು ಎಂಬ ಆರೋಪ ಕೇಳಿ ಬಂದಿತ್ತು. ಗಾಯಗೊಂಡ ನಂತರ ಆತನನ್ನು ಸ್ಥಳೀಯ ಆಸ್ಪತ್ರೆಗೆ ದಾಖಲು ಮಾಡಲಾಗಿತ್ತು. ಆದರೆ, ಚಿಕಿತ್ಸೆ ಫಲಿಸದೆ ಮೃತಪಟ್ಟಿದ್ದ. ಆಗ ಮೃತದೇಹ ತಂದು ಪೊಲೀಸ್ ಠಾಣೆಯೆದುರು ಇಟ್ಟು ಕುಟುಂಬಸ್ಥರು ಪ್ರತಿಭಟನೆ ನಡೆಸಿದ್ದರು. ಗಲಾಟೆ ವಿಕೋಪಕ್ಕೆ ತಿರುಗಿದಾಗ, ಪೊಲೀಸ್ ಠಾಣೆ, ಕಚೇರಿಯಲ್ಲಿದ್ದ ಕಡತಗಳು, ದಾಖಲೆಗಳು, ಪೀಠೋಪಕರಣಗಳು, ಪೊಲೀಸ್ ಜೀಪ್ ಹಾಗೂ ಹತ್ತಾರು ಬೈಕ್‌ಗಳಿಗೆ ಬೆಂಕಿ ಹಚ್ಚಿದ್ದರು. ಹಲವು ಪೊಲೀಸ್ ಸಿಬ್ಬಂದಿಗಳ ಮೇಲೆಯೂ ಹಲ್ಲೆ ನಡೆಸಿದ್ದರು. ಈ ಎಲ್ಲ ಘಟನಾವಳಿಗಳ ಕುರಿತು ಲಕ್ಷ್ಮೇಶ್ವರ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿತ್ತು. 8 ವರ್ಷದ ನಂತರ 122 ಜನರ ಪೈಕಿ 23 ಜನರ ಅಪರಾಧ ಸಾಬೀತಾಗಿದ್ದು, ಇದೇ 24ರಂದು ಕೋರ್ಟ್ ಶಿಕ್ಷೆ ಘೋಷಿಸಲಿದೆ.

> ಅಂದು ಲಕ್ಷ್ಮೇಶ್ವರದಲ್ಲಿ ನಡೆದ ಸದರಿ ಘಟನೆಯಿಂದ ಇಡೀ ರಾಜ್ಯವೇ ಬೆಚ್ಚಿಬಿದ್ದಿತ್ತು. ಮರಳು ದಂಧೆಕೋರರ ಅಟ್ಟಹಾಸಕ್ಕೆ ಆರಕ್ಷಕರು ನೋವನುಭವಿಸುವಂತಾಗಿತ್ತು. ಈಗ, 8 ವರ್ಷಗಳ ಬಳಿಕ 23 ಜನರ ಅಪರಾಧ ಸಾಬೀತಾಗಿದ್ದು, ಮಾರ್ಚ್ 24ರಂದು ಕೋರ್ಟ್ ಯಾವ ಪ್ರಮಾಣದ ಶಿಕ್ಷೆ ನೀಡಲಿದೆ ಎಂಬ ಕುತೂಹಲ ಮೂಡಿಸಿದೆ. ಅದೇನೇ ಇದ್ದರೂ, ಸಾರ್ವಜನಿಕರ ರಕ್ಷಣೆಗೆಂದೇ ಇರುವ ಪೊಲೀಸ್ ಠಾಣೆಗೆ ಬೆಂಕಿ ಹಚ್ಚಿ, ಸಿಬ್ಬಂದಿಗಳ ಮೇಲೆ ಕ್ರೌರ್ಯ ಮೆರೆದ ದುಷ್ಕರ್ಮಿಗಳಿಗೆ ತಕ್ಕ ಶಿಕ್ಷೆ ನೀಡಲಿ ಎನ್ನುವದು ಜಿಲ್ಲೆಯ ಪ್ರಜ್ಞಾವಂತರ ಆಗ್ರಹವಾಗಿದೆ.




### ಮಹಿಳಾ ದಿನಾಚರಣೆ, ಬೇಟಿ ಬಚಾವೋ-ಬೇಟಿ ಪಡಾವೋ ಕಾರ್ಯಕ್ರಮದ ವಾರ್ಷಿಕೋತ್ಸವ ಸಮಾರೋಪ

# ಕಾನೂನಾತ್ಮಕವಾಗಿ ಮಹಿಳೆಯರಿಗೆ ವಿಶೇಷ ಹಕ್ಕುಗಳಿವೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಭಾರತೀಯ ಸಂಸ್ಕೃತಿ, ಪರಂಪರೆಯಲ್ಲಿ ವೇದ ಕಾಲದಿಂದಲೂ ಮಹಿಳೆಯರನ್ನು ಗೌರವದ ಸ್ಥಾನಮಾನ, ಪೂಜ್ಯನೀಯ ಭಾವನೆಯಿಂದ ಕಾಣುತ್ತಾ ಬರಲಾಗಿದೆ. ಕಾನೂನಾತ್ಮಕವಾಗಿಯೂ ಮಹಿಳೆಯರಿಗೆ ವಿಶೇಷ ಗೌರವ, ಸ್ಥಾನಮಾನ, ಹಕ್ಕುಗಳಿವೆ ಎಂದು ಹಿರಿಯ ದಿವಾಣಿ ನ್ಯಾಯಾಧೀಶರಾದ ಭರತಯೋಗೀಶ ಕರಗುದರಿ ಹೇಳಿದರು.

ಅವರು ಮಂಗಳವಾರ ಪಟ್ಟಣದ ತಾಯಿ ಪಾರ್ವತಿ ಮಕ್ಕಳ ಬಳಗದ ಸಭಾಂಗಣದಲ್ಲಿ ತಾಲೂಕಾ ಕಾನೂನು ಸೇವಾ ಸಮಿತಿ, ತಾಲೂಕಾಡಳಿತ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಗಳ ಆಶ್ರಯದಲ್ಲಿ ಹಮ್ಮಿಕೊಂಡಿದ್ದ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಹಾಗೂ ಬೇಟಿ ಬಚಾವೋ-ಬೇಟಿ ಪಡಾವೋ ಕಾರ್ಯಕ್ರಮದ 10ನೇ ವಾರ್ಷಿಕೋತ್ಸವದ ಸಮಾರೋಪ ಸಮಾರಂಭ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.



ದಿವಾಣಿ ನ್ಯಾಯಾಧೀಶರಾದ ಸತೀಶ ಎಂ, ತಹಸೀಲ್ದಾರ ವಾಸುದೇವ ವಿ.ಸ್ವಾಮಿ ಮಾತನಾಡಿದರು. ಈ ವೇಳೆ ಹೆಣ್ಣುಮಕ್ಕಳ ಜನ್ಮದಿನಾಚರಣೆ, ಅನ್ನ ಪ್ರಾಶನ ಕಾರ್ಯಕ್ರಮ ಹಾಗೂ ಅತ್ಯುತ್ತಮ ಅಂಗನವಾಡಿ ಕಾರ್ಯಕರ್ತರಿಗೆ ಪ್ರಶಸ್ತಿ ನೀಡಿ ಗೌರವಿಸುವ ಕಾರ್ಯವನ್ನು ಸಿಡಿಪಿಓ ಮೃತ್ಯುಂಜಯ ಗುಡ್ಡದನ್ವೇರಿ ನಿರ್ವಹಿಸಿದರು.

ಸಹಾಯಕ ಅಭಿಯೋಜಕರಾದ ಹೀನಾಕೌಸರ ಗಂಜಿಹಾಳ, ವಕೀಲರ ಸಂಘದ ಅಧ್ಯಕ್ಷ ಬಿ.ಎಸ್. ಬಾಳೇಶ್ವರಮಠ, ವಕೀಲರಾದ ಎನ್.ಐ. ಬೆಲ್ಲದ, ರಾಜ್ಯ ಪ್ರಶಸ್ತಿ ಪುರಸ್ಕೃತ ಸಾಹಿತಿ ಲಲಿತಕ್ಕ ಕೆರಿಮನಿ, ಸಿಡಿಪಿಓ ಅನ್ನಪೂರ್ಣ ಹಳ್ಳಿಗುಡಿ, ಅಂಗನವಾಡಿ ಮೇಲ್ವಿಚಾರಕಿ ನಂದಾ ನವಲೆ, ಗಿರಿಜಾ ಪಾಟೀಲ, ಪೋಷಣ ಸಂಯೋಜಕ ಆನಂದ ಕೊಡ್ಲಿ ಸೇರಿದಂತೆ ಶಿರಹಟ್ಟಿ ಮತ್ತು ಲಕ್ಷ್ಮೇಶ್ವರ ತಾಲೂಕಿನ ಅಂಗನವಾಡಿ ಕಾರ್ಯಕರ್ತೆಯರು, ಪೋಷಕರು, ಮಕ್ಕಳು ಪಾಲ್ಗೊಂಡಿದ್ದರು.

> ಮಹಿಳೆಯರ ದಿನವನ್ನು ಮಾ.8ರಂದು ಒಂದು ದಿನಕ್ಕೆ ಸೀಮಿತಗೊಳಿಸದೆ ಪ್ರತಿದಿನ ಆಚರಿಸುವಂತಾಗಬೇಕು. ದೇಶದ ಸಂವಿಧಾನ ವ್ಯವಸ್ಥೆಯಲ್ಲಿ ಮಹಿಳೆಯರಿಗೆ ವಿಶೇಷ ಸ್ಥಾನಮಾನಗಳ ಕಾನೂನುಗಳನ್ನು ರಚನೆ ಮಾಡಿದೆ. ಮಹಿಳೆಯರ ರಕ್ಷಣೆಗೆ ಸರ್ಕಾರ ಅನೇಕ ಕಾನೂನು ರಚನೆ ಮಾಡಿದ್ದು, ನಮ್ಮ ಹೆಣ್ಣುಮಕ್ಕಳು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಭರತಯೋಗೀಶ ಕರಗುದರಿ ಕರೆ ನೀಡಿದರು.

# ಬೆಳೆ ನಷ್ಟ ಪರಿಹಾರ ನೀಡಲು ಮನವಿ



■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಪ್ರಸ್ತುತ ಸಾಲಿನಲ್ಲಿ ಸತತ ಮಳೆಯಿಂದ ಸಾಕಷ್ಟು ಬೆಳೆ ಹಾನಿಯಾಗಿದ್ದು, ಪ್ರಧಾನ ಮಂತ್ರಿ ಫಸಲ್ ಭಿಮಾ ಯೋಜನೆಯಡಿಯಲ್ಲಿ ವಿಮಾ ಹಣ ತುಂಬಿದ ರೈತರಿಗೆ ಕಡಿಮೆ ಹಣ ಜಮಾ ಆಗಿರುವುದನ್ನು ಖಂಡಿಸಿ ಮುಳಗುಂದ ಹಸಿರು ಸೈನೆ ರೈತ ಸಂಘದ ಹಾಗೂ ಮುಳಗುಂದ ಸುತ್ತಮುತ್ತಲಿನ ಗ್ರಾಮದ ರೈತ ಸಂಘದ ಸದಸ್ಯರು ಮುಳಗುಂದ ಗ್ರಾಮ ಲೆಕ್ಕಾಧಿಕಾರಿಗಳ ಕಛೇರಿ ಎದುರು ಪ್ರತಿಭಟನೆ ನಡೆಸಿ ಆಕ್ರೋಶ ವ್ಯಕ್ತಪಡಿಸಿದರು.

ಸ್ಥಳಕ್ಕೆ ಆಗಮಿಸಿದ ಗದಗ ಕೃಷಿ ಜಂಟಿ ಅಧಿಕಾರಿ ತಾರಾಮಣಿ ರೈತರ ಮನವಿ ಸ್ವೀಕರಿಸಿ ಮಾತನಾಡಿ, ಇದು ಮಧ್ಯಂತರ ಪರಿಹಾರವಲ್ಲ, ಸ್ಥಳ ನಿರ್ದಿಷ್ಟ ಪರಿಹಾರವಾಗಿದೆ. ಅತೀ ಹೆಚ್ಚು ಮಳೆಯಾಗಿ ಯಾರ ಜಮಿನಿನಲ್ಲಿ ಬೆಳೆ ಹಾನಿಯಾಗಿದೆಯೋ ಅಂತಹ ರೈತರು ಅರ್ಜಿ ಸಲ್ಲಿಸಿದ್ದರು. 49251 ಅರ್ಜಿಗಳು ಬಂದಿದ್ದು, ಈಗಾಗಲೇ 27.54 ಕೋಟಿ ರೂ ಹಣವನ್ನು ವಿಮಾ ಕಂಪನಿ ವಿತರಿಸಿದೆ. ಉಳಿದ ರೈತರ ಅರ್ಜಿಗಳನ್ನು ಮತ್ತೊಮ್ಮೆ ಪರಿಶೀಲಿಸಿ ಪರಿಹಾರ ಒದಗಿಸಲಾಗುವುದು ಎಂದರು.

ರೈತ ಸಂಘದ ಅಧ್ಯಕ್ಷ ದೇವರಾಜ ಸಂಗನಪೇಟಿ, ಗ್ರಾಮ ಲೆಕ್ಕಾಧಿಕಾರಿ ಎಸ್.ಎಸ್. ಪಟ್ಟೇದ, ಕೃಷಿ ಅಧಿಕಾರಿ ಬಸವರಾಜೇಶ್ವರಿ, ಗುರಿಕಾರ, ರೈತ ಮುಖಂಡರಾದ ಕಿರಣ ಕುಲಕರ್ಣಿ, ದೇವಪ್ಪಾ ಅಣ್ಣಿಗೇರಿ, ಮುತ್ತಪ್ಪ ಪಲ್ಲೇದ, ಮುತ್ತಪ್ಪ ಬಳ್ಳಾರಿ, ಶಂಕ್ರಯ್ಯ ಹಿರೇಮಠ, ಗುಡುಸಾಬ ಗಾಡಿ ಸೇರಿದಂತೆ ನೂರಾರು ರೈತರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

### ಹೋಳಿ/ರಂಜಾನ್ ಹಬ್ಬದ ಪ್ರಯುಕ್ತ ಕರೆದಿದ್ದ ಶಾಂತಿ ಸಭೆಯಲ್ಲಿ ಡಿವಿಸ್‌ಪಿ ಮಹಾಂತೇಶ ಸಜ್ಜನ

# ಹಬ್ಬಗಳು ನಾಡಿನ ಸಂಪ್ರದಾಯದ ಪ್ರತೀಕ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಲಕ್ಷ್ಮೇಶ್ವರದಲ್ಲಿ ನಡೆಯುವ ಹೋಳಿ ಮತ್ತು ರಂಜಾನ್ ಹಬ್ಬವನ್ನು ಹಿಂದೂ-ಮುಸ್ಲಿಂ ಬಾಂಧವರು ಶಾಂತಿ-ಸೌಹಾರ್ದತೆಯಿಂದ ಆಚರಿಸಬೇಕು. ಮುಂಜಾಗ್ರತಾ ಕ್ರಮವಾಗಿ ಪೊಲೀಸ್ ಇಲಾಖೆ ಅಗತ್ಯ ಕ್ರಮ ಕೈಗೊಳ್ಳಲಿದೆ ಎಂದು ಡಿಎಸ್‌ಪಿ ಮಹಾಂತೇಶ ಸಜ್ಜನ ಹೇಳಿದರು.

ಅವರು ಪಟ್ಟಣದ ಪೊಲೀಸ್ ಠಾಣೆಯಲ್ಲಿ ಹೋಳಿ/ರಂಜಾನ್ ಹಬ್ಬದ ಪ್ರಯುಕ್ತ ಕರೆಯಲಾಗಿದ್ದ ವಿವಿಧ ಸಮಾಜಗಳ 'ಮುಖಂಡರುಗಳನ್ನೊಳಗೊಂಡ ಶಾಂತಿ ಸಭೆಯಲ್ಲಿ ಮಾತನಾಡುತ್ತಿದ್ದರು.

ಹಬ್ಬಗಳು ನಾಡಿನ ಸಂಪ್ರದಾಯದ ಪ್ರತೀಕ. ಪರಸ್ಪರರಲ್ಲಿ ಸ್ನೇಹ, ಸೌಹಾರ್ದತೆ ಬೆಸೆಯುವ ಕೊಂಡಿಯಾಗಿವೆ. ಹಿಂದೂ-ಮುಸ್ಲಿಂ ಭಾವೈಕ್ಯತೆಗೆ ಹೆಸರಾದ ಪಟ್ಟಣದಲ್ಲಿ ಹೋಳಿ ಮತ್ತು ರಂಜಾನ್ ಹಬ್ಬವನ್ನು ಸಹೋದರತ್ವ ಭಾವನೆಯಿಂದ ಶಾಂತಿಯುತ ಮತ್ತು ಅರ್ಥಪೂರ್ಣವಾಗಿ ಆಚರಿಸಿ. ಹಬ್ಬದ ಸಂದರ್ಭದಲ್ಲಿ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುವ ರಾಸಾಯನಿಕಯುಕ್ತ ಬಣ್ಣ ಬಳಸಬಾರದು. ಅಹಿತಕರ ಘಟನೆಗೆ ಕಾರಣರಾದವರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದರು.




ಹಿರಿಯರಾದ ಪಿ.ಬಿ. ಖರಾಟೆ ಮಾತನಾಡಿ, ಸ್ನೇಹ-ಸೌಹಾರ್ದತೆ ಮತ್ತು ಧಾರ್ಮಿಕ ಬಾಂಧವ್ಯ ವೃದ್ಧಿಸುವ ಪವಿತ್ರವಾದ ಹೋಳಿ ಮತ್ತು ರಂಜಾನ್ ಹಬ್ಬವನ್ನು ಎಲ್ಲರೂ ಸಹೋದರತೆಯ ಭಾವನೆಯಿಂದ ಆಚರಿಸೋಣ. ನಮ್ಮ ಪೂರ್ವಜರ ಕಾಲದಿಂದಲೂ ಆಚರಣೆಯಲ್ಲಿರುವ ಎಲ್ಲ ಹಬ್ಬಗಳಿಗೂ ಅರ್ಥಪೂರ್ಣವಾದ ಕಾರಣಗಳಿದ್ದು, ಅವುಗಳನ್ನು ಮುಂದಿನ ಸಮಾಜಕ್ಕೆ ಕೊಂಡೊಯ್ಯುವ ಜವಾಬ್ದಾರಿ ಎಲ್ಲರದ್ದಾಗಿದೆ ಎಂದರು.

ಗಂಗಾಧರ ಮೆಣಸಿನಕಾಯಿ ಮಾತನಾಡಿ, ಶಿಗ್ಲಿ ಕ್ರಾಸ್‌ನಲ್ಲಿ ಟ್ರಾಫಿಕ್ ಸಿಗ್ನಲ್ ಅಳವಡಿಸಿ ಮತ್ತು ಸಂಚಾರ ದಟ್ಟಣೆಯ ಪ್ರಮುಖ ಸ್ಥಳಗಳಲ್ಲಿ ಪೊಲೀಸ್ ಸಿಬ್ಬಂದಿಗಳನ್ನು ನಿಯೋಜಿಸಿದರೆ ಹೆಚ್ಚುತ್ತಿರುವ ಅಪಘಾತ, ಸಂಚಾರ ದಟ್ಟಣೆ ಸಮಸ್ಯೆಗಳು ಒಂದಿಷ್ಟಾದರೂ ಕಡಿಮೆಯಾಗುತ್ತವೆ ಎಂಬ ಸಲಹೆ ನೀಡಿದರು.

ಸಿಪಿಐ ನಾಗರಾಜ ಮಾಡಳ್ಳಿ, ಪಿಎಸ್‌ಐ ಟಿ.ಕೆ. ರಾಠೋಡ ಮಾತನಾಡಿದರು. ಈ ಸಂದರ್ಭದಲ್ಲಿ ಸೋಮಣ್ಣ ಡಾಣಗಲ್, ದೀಪಕ ಲಮಾಣಿ, ಮಹೇಶ ಕಲಘಟಗಿ, ಬಿ.ಎಸ್. ಈಳಗೇರ, ನಾಗಯ್ಯ ಮಠಪತಿ, ಶೇಕಣ್ಣ ಕಾಳೆ, ಅಣ್ಣಪ್ಪ ರಾಮಗೇರಿ, ಅನುರಾಜ್ ಹಂಜಗಿ, ಶಿದ್ದಪ್ಪ ನೆನಗನಹಳ್ಳಿ, ಎನ್.ಆರ್. ಸಾತಪುತೆ, ಮಂಜುನಾಥ ಶೇರಸೂರಿ, ಸುರೇಶ ಹಟ್ಟಿ, ಶಿವಾನಂದ ಹೊಂಬಳ ಮುಂತಾದವರಿದ್ದರು.

> ಮಾ.14ರಂದು ತಾಲೂಕಿನ ಗ್ರಾಮೀಣ ಭಾಗದಲ್ಲಿ, ಮಾ. 18ರಂದು ಲಕ್ಷ್ಮೇಶ್ವರ ಮತ್ತು ಶಿಗ್ಲಿಯಲ್ಲಿ ರಂಗಿನೋಕುಳಿ ಹಬ್ಬ ಆಚರಿಸಲಾಗುತ್ತಿದ್ದು, ಮಾ.31 ರಂದು ರಂಜಾನ್ ಹಬ್ಬದ ಆಚರಣೆಯಿದೆ.

ಕವನ

## ಹೋಳಿ



ಹೋಳಿಯ ಬಣ್ಣಗಳು
ಹಳದಿ ಸಂಭ್ರಮದ ಬಣ್ಣಗಳು
ಹಸಿರು ಸಮೃದ್ಧಿಯ ಬಣ್ಣಗಳು
ಕೇಸರಿ, ನೇರಳೆ, ಕೆಂಪು, ನೀಲಿ ಬಣ್ಣಗಳು
ಈ ರಂಗು ರಂಗಿನ ಬಣ್ಣಗಳು
ರಂಗು ರಂಗಿನ ರಂಗೋಲಿಯಂತೆ
ರಂಗು ರಂಗಿನ ಕಾಮನಬಿಲ್ಲಿನಂತೆ
ಈ ಎಲ್ಲಾ ಬಣ್ಣ ಬಣ್ಣಗಳ ಹಬ್ಬ ಹೋಳಿ
ಬಣ್ಣ ತುಂಬುವ ಹಬ್ಬ ಹೋಳಿ
ಬಕೆಟ್ ನೀರಲಿ ಬಣ್ಣವ ತುಂಬಿಸಿ
ಬಣ್ಣದ ಹೋಳಿಯ ರಂಗು ಎರಚಿ
ರಂಗು ರಂಗಿನ ಬಣ್ಣಗಳಲ್ಲಿ
ನಮ್ಮ ಜೀವನ ರಂಗಾಗಿರಲ್ಲಿ
ಈ ಬಣ್ಣದ ಹೋಳಿಯ ಹಬ್ಬ
ಹೊಸ ಚೈತನ್ಯ ತುಂಬಿ ಬರಲಿ
ಬಣ್ಣ ಬಣ್ಣದ ಕನಸುಗಳು ಹೊತ್ತು ತರಲಿ



– ವಿ.ಎಂ.ಎಸ್. ಗೋಪಿ.
ಲೇಖಕರು, ಸಾಹಿತಿಗಳು–ಬೆಂಗಳೂರು.

## ಪ್ಯಾಲೆಸ್ತೀನ್ ಹೋರಾಟಗಾರ ಖಲೀಲ್ ಗಡೀಪಾರು ವಿರೋಧಿಸಿ ಭಾರೀ ಪ್ರತಿಭಟನೆ: ಅಮೆರಿಕ ನ್ಯಾಯಾಲಯದಿಂದ ತಾತ್ಕಾಲಿಕ ತಡೆ

■ವಿಜಯಸಾಕ್ಷಿ ಸುದ್ದಿ, ಅಮೆರಿಕಾ

ವಾರಾಂತ್ಯದಲ್ಲಿ ಅಮೆರಿಕದ ವಲಸೆ ಅಧಿಕಾರಿಗಳಿಂದ ಬಂಧಿಸಲ್ಪಟ್ಟ ಪ್ಯಾಲೆಸ್ತೀನ್ ಹೋರಾಟಗಾರ ಮಹಮೂದ್ ಖಲೀಲ್ ಅವರನ್ನು ಗಡೀಪಾರು ಮಾಡುವ ಟ್ರಂಪ್ ಆಡಳಿತದ ಪ್ರಯತ್ನವನ್ನು ಫೆಡರಲ್ ನ್ಯಾಯಾಧೀಶರು ತಾತ್ಕಾಲಿಕವಾಗಿ ತಡೆದಿದ್ದಾರೆ.

ಕೊಲಂಬಿಯಾ ವಿಶ್ವವಿದ್ಯಾಲಯದ ಪದವೀಧರ ಮತ್ತು ಅಮೆರಿಕದ ಖಾಯಂ ನಿವಾಸಿ ಖಲೀಲ್, ನ್ಯೂಯಾರ್ಕ್ ನಗರದ ಐವಿ ಲೀಗ್ ಕ್ಯಾಂಪಸ್‌ನಲ್ಲಿ ಕಳೆದ ವರ್ಷದ ಗಾಜಾ ಯುದ್ಧ ವಿರೋಧಿಸಿ ನಡೆದ ಪ್ರತಿಭಟನೆಗಳಲ್ಲಿ ಪ್ರಮುಖ ಪಾತ್ರ ವಹಿಸಿದ್ದರು.

ಕಾಲೇಜು ಕ್ಯಾಂಪಸ್‌ಗಳಲ್ಲಿ ಪ್ಯಾಲೆಸ್ತೀನ್ ಪರ ಪ್ರತಿಭಟನಾಕಾರರ ಮೇಲೆ ಕಠಿಣ ಕ್ರಮಕೈಗೊಳ್ಳುವುದಾಗಿ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ನೀಡಿದ ಪ್ರತಿಜ್ಞೆಯ ಭಾಗವಾಗಿ ಈ ಬಂಧನವಾಗಿದೆ. ಇದನ್ನು ಅವರು "ಹಲವು ಬಂಧನಗಳಲ್ಲಿ ಮೊದಲ ಬಂಧನ" ಎಂದು ಕರೆದಿದ್ದಾರೆ. ಸೋಮವಾರ ಮಧ್ಯಾಹ್ನ ನ್ಯೂಯಾರ್ಕ್ ನಗರದಲ್ಲಿ ಪ್ರತಿಭಟನಾಕಾರರು ಜಮಾಯಿಸಿ ಖಲೀಲ್ ಅವರ ಬಿಡುಗಡೆಗೆ ಒತ್ತಾಯಿಸಿದರು ಮತ್ತು ಟ್ರಂಪ್ ಆಡಳಿತದ ಕ್ರಮಗಳನ್ನು ಖಂಡಿಸಿದರು.

ಖಲೀಲ್ ಅವರನ್ನು ಗಡೀಪಾರು ಮಾಡಲು ಅಮೆರಿಕ ಪ್ರಯತ್ನಿಸಿದೆ ಎಂದು ವರದಿಯಾದ ಕೂಡಲೇ ಪ್ಯಾಲೆಸ್ತೀನ್ ಧ್ವಜಗಳನ್ನು ಬೀಸುತ್ತಾ ಹೋರಾಟಗಾರರು ಲೋವರ್ ಮ್ಯಾನ್‌ಹ್ಯಾಟನ್‌ನ ಫೋಲೆ ಚೌಕದಲ್ಲಿ ಜಮಾಯಿಸಿದರು. ಪ್ರತಿಭಟನಾಕಾರರು ನಂತರ ನಗರ ಸಭಾಂಗಣದ ಕಡೆಗೆ ಮೆರವಣಿಗೆ ನಡೆಸಿದರು. ಈ ಸಂದರ್ಭ ಕನಿಷ್ಠ ಒಬ್ಬ ಹೋರಾಟಗಾರನನ್ನು ಬಂಧಿಸಲಾಯಿತು.

### ಮಹಿಳಾ ಇಫ್ತಿಯಾರ ಕೂಟದಲ್ಲಿ ಚಿಂತಕಿ ಕವಿತಾ ದಂಡಿನ ಉಪನ್ಯಾಸ

# ಉಪವಾಸ ವೃತಕ್ಕೆ ಆಧ್ಯಾತ್ಮಿಕ ಹಿನ್ನೆಲೆಯಿದೆ

■ವಿಜಯಸಾಕ್ಷಿ ಸುದ್ದಿ, ಗದಗ

ದೇಹವನ್ನು ಶುದ್ಧೀಕರಿಸುವಲ್ಲಿ ಉಪವಾಸ ಆಚರಣೆ ಸಹಕಾರಿಯಾಗಿದ್ದು, ಉಪವಾಸ ವೃತಕ್ಕೆ ಆಧ್ಯಾತ್ಮಿಕ ಹಿನ್ನೆಲೆ ಹಾಗೂ ವೈಜ್ಞಾನಿಕ ಮನೋಭಾವನೆ ಇದೆ. ಇಂದ್ರಿಯಗಳ ನಿಗ್ರಹಕ್ಕೆ ಉಪವಾಸ ಆಚರಣೆಯು ಪೂರಕವಾಗಿದ್ದು, ಮನೋನಿಯಂತ್ರಣಕ್ಕೆ ಉಪವಾಸ ಪ್ರೇರಣೆಯಾಗಿದೆ ಎಂದು ಚಿಂತಕಿ ಕವಿತಾ ದಂಡಿನ ಹೇಳಿದರು.

ಅವರು ನರಸಾಪೂರದಲ್ಲಿ ಜರುಗಿದ ಮಹಿಳಾ ಇಫ್ತಿಯಾರ ಕೂಟದಲ್ಲಿ 'ಉಪವಾಸ ಆಚರಣೆಯ ಮಹತ್ವ' ವಿಷಯದ ಕುರಿತು ಉಪನ್ಯಾಸ ನೀಡಿ ಮಾತನಾಡಿದರು.

ಪ್ರತಿಯೊಂದು ಧರ್ಮದಲ್ಲಿಯೂ ಜನರು ತಮ್ಮ ನಂಬಿಕೆ ಹಾಗೂ ಸಂಪ್ರದಾಯ–ಪದ್ಧತಿಗಳ ಅನುಸಾರವಾಗಿ ಉಪವಾಸ ವೃತಾಚರಣೆಯನ್ನು ಕೈಗೊಳ್ಳುತ್ತಾರೆ. ಇದು ಅನೇಕ ಖಾಯಿಲೆಗಳಿಗೆ ಸಂಜೀವಿನಿಯಾಗಿದೆ. ಉಪವಾಸ ಮಾಡುವಾಗ ಮನಸ್ಸಿನ ಸಂಯಮ ಅತ್ಯಗತ್ಯವಾಗಿದೆ ಎಂದರು.

ಅತಿಥಿ ಮಹಜಬೀನ್ ಮಕಾನದಾರ ಮಾತನಾಡಿ, ಉಪವಾಸವು ವ್ಯಕ್ತಿಯ ಮನಸ್ಸನ್ನು ಸದೃಢಗೊಳಿಸಿ ನಮ್ಮಲ್ಲಿ ಮನೋಸ್ಥೈರ್ಯವನ್ನು ಹೆಚ್ಚಿಸುತ್ತದೆ. ಮಾನಸಿಕ ಸದೃಢತೆ, ಆರೋಗ್ಯ ಪರಿಪೂರ್ಣತೆ, ಉನ್ನತ ವಿಚಾರಗಳು–ಮೌಲ್ಯಗಳು ಉಪವಾಸ ಆಚರಣೆಯಿಂದ ಬೆಳೆದು ಬರುತ್ತವೆ ಎಂದರು.



ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಅಂಗವಾಗಿ ಸಲೀಮಾ ಬೇಗಂ ಕಲ್ಮನಿ ಅವರನ್ನು ಸನ್ಮಾನಿಸಲಾಯಿತು. ವೇದಿಕೆಯ ಮೇಲೆ ಆಪಾಜಾನ್ ತಾಳಿಕೋಟಿ, ಅನುಸೂಯಾ ಹೊಂಬಳ ಉಪಸ್ಥಿತರಿದ್ದರು.

ರೇಶ್ಮಾ ಕಲ್ಮನಿ ಹಾಗೂ ಆಫ್ರೀನ್ ಹಾವೇರಿ ಕುರಾನ್ ಪಠಿಸಿದರು. ಜಬೀನಾ ಹುಲಕೋಟಿ ಸ್ವಾಗತಿಸಿದರು. ಫಾತೀಮಾ ನದಾಫ್ ಪರಿಚಯಿಸಿದರು. ಹಮೀದಾ ನದಾಫ್ ಪ್ರಾಸ್ತಾವಿಕವಾಗಿ ಮಾತನಾಡಿದರು. ಕೊನೆಯಲ್ಲಿ ಆಫ್ರೀನ್ ಹರಿಹರ ವಂದಿಸಿದರು. ಕಾರ್ಯಕ್ರಮದಲ್ಲಿ ನಿರ್ಮಲಾ ಕರಿಗೌಡ್ರ, ಅಕ್ಕಮಹಾದೇವಿ ಮುಳಗುಂದಮಠ, ಆಫ್ರೀನ್ ಹೊಸಳ್ಳಿ, ಈರವ್ವ ದೊಡ್ಡಮನಿ, ಸುಮಾ ದಾಸರ, ಮೀನಾ ಜಳಕಿ, ಮಹಾಲಕ್ಷ್ಮೀ ರೆಡ್ಡಿ, ಗಿರಿಜವ್ವ ಜಾಲಿಹಾಳ, ಕವಿತಾ ಮಾದಗುಂಡಿ, ಪದ್ಮಾವತಿ ಸಿರಿಗೇರಿ, ಫಾತೀಮಾ ಹೊಸಳ್ಳಿ ಮುಂತಾದವರು ಉಪಸ್ಥಿತರಿದ್ದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ನಿವೃತ್ತ ಶಿಕ್ಷಕಿ ತಾಹೀರಾಭಾನು ಶಿರಹಟ್ಟಿ ಮಾತನಾಡಿ, ಉಪವಾಸ ಆಚರಣೆಯ ಸಮಯದಲ್ಲಿ ಮನಸ್ಸು ನಿಗ್ರಹದಲ್ಲಿ ಇರಬೇಕು. ಲಘುವಾದ ಹಾಗೂ ಜೀರ್ಣಗೊಳ್ಳುವ ಸೂಕ್ಷ್ಮ ಆಹಾರ ಸೇವನೆ ಮಾಡಬೇಕು. ದೇವರಿಗಾಗಿಯೇ ಈ ಸಮಯವನ್ನು ಮೀಸಲಿಡುವುದಾಗಿದ್ದು, ಯಾವುದೇ ಕೆಟ್ಟ ಆಲೋಚನೆಗಳು ನಮ್ಮ ಮನಸ್ಸಿನಲ್ಲಿ ಸುಳಿಯದಂತೆ ನೋಡಿಕೊಳ್ಳಬೇಕು ಎಂದರು.

## ಮಲ್ಲೇಶ್ವರದ ಬಿಜೆಪಿ ಮಂಡಲ ಕಾರ್ಯದರ್ಶಿ ಸೂಸೈಡ್!

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಮಲ್ಲೇಶ್ವರದ ಬಿಜೆಪಿ ಮಂಡಲ ಕಾರ್ಯದರ್ಶಿ ಮಂಗಳವಾರ ಮಧ್ಯಾಹ್ನ ನೇಣು ಬಿಗಿದುಕೊಂಡು ಮನೆಯಲ್ಲಿಯೇ ಆತ್ಮಹತ್ಯೆ ಮಾಡಿಕೊಂಡ ಘಟನೆ ಬೆಂಗಳೂರಿನ ಮತ್ತಿಕೆರೆಯಲ್ಲಿ ನಡೆದಿದೆ.

ಮಲ್ಲೇಶ್ವರದ ಬಿಜೆಪಿ ಮಂಡಲಕ್ಕೆ ಒಂದು ದಿನದ ಹಿಂದೆಯಷ್ಟೇ ಅಧ್ಯಕ್ಷರು ಪ್ರಧಾನ ಕಾರ್ಯದರ್ಶಿಗಳ ನೇಮಕವಾಗಿತ್ತು ಎಂದು ತಿಳಿದುಬಂದಿದೆ. ಸದ್ಯ ಘಟನಾ ಸ್ಥಳಕ್ಕೆ ಭೇಟಿ ನೀಡಿರುವ ಯಶವಂತಪುರ ಪೊಲೀಸರು ತನಿಖೆ ಕೈಗೊಂಡಿದ್ದಾರೆ.

ಕೆಲ ದಿನಗಳ ಹಿಂದೆಯಷ್ಟೇ ಪತಿಯನ್ನು ಕಳೆದುಕೊಂಡಿದ್ದ ಮಂಜುಳಾ, ಮಾನಸಿಕವಾಗಿ ನೊಂದಿದ್ದರಿಂದ ಖಿನ್ನತೆಗೆ ಒಳಗಾಗಿದ್ದರು ಎನ್ನಲಾಗಿತ್ತು. ಸದ್ಯ ಆತ್ಮಹತ್ಯೆಗೆ ನಿಖರ ಕಾರಣ ತಿಳಿದುಬಂದಿಲ್ಲ. ಪೊಲೀಸರು ತನಿಖೆ ಚುರುಕುಗೊಳಿಸಿದ್ದಾರೆ.

# ಮಹಿಳೆಯರು ಸಮಾಜಮುಖಿಗಳಾಗಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಬದಲಾಗುತ್ತಿರುವ ಇಂದಿನ ಸಾಮಾಜಿಕ ವ್ಯವಸ್ಥೆಯಲ್ಲಿ ಮಹಿಳೆಯರು ತಮ್ಮಲ್ಲಿನ ಕೀಳರಿಮೆ ಬಿಟ್ಟು ಸಾಧಕರ ಪ್ರೇರಣೆಯಿಂದ ಎಲ್ಲ ರಂಗಗಲ್ಲಿ ಪಾಲ್ಗೊಂಡು ಸಮಾಜಮುಖಿಗಳಾಗಿ ಕಾರ್ಯನಿರ್ವಹಿಸಬೇಕಿದೆ ಎಂದು ಎಂದು ಲಕ್ಷ್ಮೇಶ್ವರದ ತಾಯಿ ಪಾರ್ವತಿ ಮಕ್ಕಳ ಬಳಗ ಶಿಕ್ಷಣ ಸಂಸ್ಥೆಯ ಉಪಾಧ್ಯಕ್ಷರಾದ ಜಯಲಕ್ಷ್ಮೀ ಮಹಾಂತಶೆಟ್ಟರ ಹೇಳಿದರು.

ಅವರು ಪಟ್ಟಣದ ತಾಯಿ ಪಾರ್ವತಿ ಮಕ್ಕಳ ಬಳಗದಲ್ಲಿ ಹಮ್ಮಿಕೊಳ್ಳಲಾಗಿದ್ದ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.




ಮಹಿಳೆ ಮಗಳು, ಪತ್ನಿ, ತಾಯಿ, ಸ್ನೇಹಿತೆ, ಮಾರ್ಗದರ್ಶಿಯಾಗಿ, ಸಮಾಜದ ಕಣ್ಣಾಗಿ ಕಾರ್ಯನಿರ್ವಹಿಸುತ್ತಾಳೆ. ಮನೆಯೇ ಮೊದಲ ಪಾಠಶಾಲೆ, ತಾಯಿಯೇ ಮೊದಲ ಗುರು ಎನ್ನುವಂತೆ ಪುರುಷರಿಗಿಂತಲೂ ಮಹಿಳೆಯರಿಗೆ ಶಿಕ್ಷಣ ಕ್ಷೇತ್ರದ ಬದಲಾವಣೆಯಲ್ಲಿ ಹೆಚ್ಚಿನ ಜವಾಬ್ದಾರಿ ಮತ್ತು ಪಾತ್ರವಿದೆ. ಸಮಾಜದ ಕಣ್ಣಾಗಿರುವ ಮಹಿಳೆಯರು ತಮ್ಮ ಜವಾಬ್ದಾರಿಯನ್ನು ನಿರ್ವಹಿಸಬೇಕಿದೆ ಎಂದರು.

ಪುರಸಭೆ ಮಾಜಿ ಅಧ್ಯಕ್ಷೆ ಅಶ್ವಿನಿ ಅಂಕಲಕೋಟಿ ಮಾತನಾಡಿದರು. ಅಧ್ಯಕ್ಷತೆಯನ್ನು ಸಂಸ್ಥೆಯ ಅಧ್ಯಕ್ಷರಾದ ಸುವರ್ಣಾಬಾಯಿ ಬಹದ್ದೂರದೇಸಾಯಿ ವಹಿಸಿದ್ದರು. ಶಾರದಕ್ಕ ಮಹಾಂತಶೆಟ್ಟರ, ರೋಹಿಣಿಬಾಯಿ ಬಹದ್ದೂರದೇಸಾಯಿ, ಕೆಸಿಸಿ ಬ್ಯಾಂಕ್ ಮ್ಯಾನೇಜರ್ ಅಮೃತ ಪಾಟೀಲ, ಪ್ರಭಾವತಿ ಪುರಾಣಿಕಮಠ, ಮುಖ್ಯೋಪಾಧ್ಯಾಯ ಜೆ.ಡಿ. ಲಮಾಣಿ, ಪ್ರಭು ಯಕ್ಕಿಕೊಪ್ಪ, ರೂಪಾ ನವಲೆ, ಎಫ್.ಎಂ. ಚಕಾರದ, ರಾಜೇಶ ಶೆಟ್ಟರ, ಎಂ.ಸಿ. ಹಿರೇಮಠ, ಆರ್.ಎಂ. ಕದಡಿ, ಸಂಜೀವ ಬಾರಕೇರ, ವಿಜಯಕುಮಾರ ಬಿಳೆಯಲಿ ಇದ್ದರು.

### ತಾಲೂಕಾ ವೀರಶೈವ ಲಿಂಗಾಯತ ಪಂಚಮಸಾಲಿ ಸಂಘದಿಂದ ಮಹಿಳಾ ದಿನಾಚರಣೆ

# ಮಹಿಳೆ ದೇಶದ ಪ್ರಗತಿಗೆ ಕಾರಣಳು

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಮಹಿಳೆ ತನ್ನ ಕುಟುಂಬದ ಪ್ರಗತಿಯೊಂದಿಗೆ ಎಲ್ಲ ಕ್ಷೇತ್ರಗಳಲ್ಲಿ ಸಮರ್ಥವಾಗಿ ಕಾರ್ಯ ನಿರ್ವಹಿಸುವ ಮೂಲಕ ಸುಭದ್ರ, ಸಮೃದ್ಧ, ಸುಸಂಸ್ಕೃತ ರಾಷ್ಟ್ರ ನಿರ್ಮಾಣದಲ್ಲಿ ಪ್ರಮುಖ ಪಾತ್ರ ವಹಿಸುತ್ತಾಳೆ. ಅದಕ್ಕಾಗಿ ಮಹಿಳೆಗೆ ಭಾರತದಲ್ಲಿ ಶ್ರೇಷ್ಠ ಸ್ಥಾನವನ್ನು ನೀಡಲಾಗಿದೆ ಎಂದು ಹರಿಹರ ಪಂಚಮಸಾಲಿ ಜಗದ್ಗುರು ಪೀಠದ ಶ್ರೀ ಜ. ವಚನಾನಂದ ಮಹಾಸ್ವಾಮಿಗಳು ನುಡಿದರು.

ಅವರು ಪಟ್ಟಣದಲ್ಲಿ ಲಕ್ಷ್ಮೇಶ್ವರ ತಾಲೂಕಾ ವೀರಶೈವ ಲಿಂಗಾಯತ ಪಂಚಮಸಾಲಿ ಸಂಘದ ವತಿಯಿಂದ ಹಮ್ಮಿಕೊಳ್ಳಲಾಗಿದ್ದ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ತೊಟ್ಟಿಲು ತೂಗುವ ಕೈ ಜಗತ್ತನ್ನೇ ತೂಗಬಲ್ಲದು ಎಂಬಂತೆ ಮಹಿಳೆಯು ಕುಟುಂಬದ ಪ್ರಗತಿಗಷ್ಟೇ ಅಲ್ಲದೇ ಎಲ್ಲ ಕ್ಷೇತ್ರಗಳಲ್ಲಿ ಅಪ್ರತಿಮ ಸಾಧನೆ, ಸೇವೆಯ ಮೂಲಕ ದೇಶದ ಪ್ರಗತಿಗೂ ಕಾರಣಳಾಗಿದ್ದಾಳೆ. ಸಮುದಾಯದಲ್ಲಿ ತಾಳ್ಮೆ ಮತ್ತು ಸಹನೆಯ ಗುಣ ಇಲ್ಲದಿರುವುದೇ ಇಂದಿನ ಅಶಾಂತಿ–ಅತೃಪ್ತಿಗಳಿಗೆ ಮೂಲ ಕಾರಣವಾಗಿದೆ ಎಂದರು.



ಕಾರ್ಯಕ್ರಮ ಉದ್ಘಾಟಿಸಿದ ಮಾಜಿ ಮುಖ್ಯಮಂತ್ರಿ, ಸಂಸದ ಬಸವರಾಜ ಬೊಮ್ಮಾಯಿ ಅವರ ಧರ್ಮಪತ್ನಿ ಚನ್ನಮ್ಮ ಬೊಮ್ಮಾಯಿ ಮಾತನಾಡಿ, ಎಲ್ಲಿ ಮಹಿಳೆ ಗೌರವಿಸಲ್ಪಡುತ್ತಾಳೋ ಅಲ್ಲಿ ದೇವತೆಗಳು ನೆಲೆಸುತ್ತಾರೆ. ಭೂಮಿ, ನದಿ, ದೇವತೆಗಳ ಹೆಸರೇ ಹೆಣ್ಣಾಗಿರುವುದು ಹೆಣ್ಣಿನ ಶ್ರೇಷ್ಠತೆಗೆ ಸಾಕ್ಷಿಯಾಗಿದೆ. ಮಹಿಳೆ ಸಮಾಜದ ಬಹುಮುಖ್ಯ ಅಂಗವಾಗಿದ್ದು, ಮಹಿಳೆ ಸುಶಿಕ್ಷಿತಳಾಗಬೇಕು. ಆ ಮೂಲಕ ಬಲಿಷ್ಠ ರಾಷ್ಟ್ರ ನಿರ್ಮಾಣ ಸಾಧ್ಯ ಎಂದರು.

ಸೂಪರ್ ಸಂಸಾರ ಕಾರ್ಯಕ್ರಮವನ್ನು ಪಂಚಮಸಾಲಿ ಸಂಘದ ಮಹಿಳಾ ಘಟಕದ ಪ್ರಧಾನ ಕಾರ್ಯದರ್ಶಿ ಡಾ. ಶೋಭಾ ನಿಶ್ಮಿಮಗೌಡರ ಉದ್ಘಾಟಿಸಿ ಮಾತನಾಡಿದರು. ಪುರಸಭೆ ಅಧ್ಯಕ್ಷೆ ಯಲ್ಲವ್ವ ದುರಗಣ್ಣವರ, ಮಾಜಿ ಅಧ್ಯಕ್ಷೆ ಜಯಕ್ಕ ಅಂದಲಗಿ, ಸಂಘದ ತಾಲೂಕಾಧ್ಯಕ್ಷೆ ಶಾರದಾ ಮಹಾಂತಶೆಟ್ಟರ, ರಾಜ್ಯ ಮಹಿಳಾ ಘಟಕದ ಉಪಾಧ್ಯಕ್ಷೆ ಮಾಲಾದೇವಿ ದಂದರಗಿ, ಸರೋಜಾ ಚಂದ್ರು ಲಮಾಣಿ ಉಪಸ್ಥಿತರಿದ್ದರು.

ಸೂಪರ್ ಸಂಸಾರ ಸ್ಪರ್ಧೆಯಲ್ಲಿ ಪುಷ್ಪಾ–ಪ್ರಭು ಅಣ್ಣಿಗೇರಿ(ಪ್ರಥಮ), ಮುಕ್ತಾ–ಮಲ್ಲು ಕಳಸಾಪುರ (ದ್ವಿತೀಯ), ಸಹನಾ–ಅನಿಲ ಮುಂಜಿ (ತೃತೀಯ) ಸ್ಥಾನ ಪಡೆದರು. ರಂಗೋಲಿ ಸ್ಪರ್ಧೆಯಲ್ಲಿ ಸಹನಾ ಮುಂಜಿ (ಪ್ರಥಮ) ರಚನಾ ಮುಂಜಿ (ದ್ವಿತೀಯ) ಅನ್ನಪೂರ್ಣೇಶ್ವರಿ ಹಿರೇಮಠ (ತೃತೀಯ) ಬಹುಮಾನ ಪಡೆದರು.

ಇದೇ ಸಂದರ್ಭದಲ್ಲಿ ರಾಜ್ಯಮಟ್ಟದ ಕಿತ್ತೂರು ಚನ್ನಮ್ಮ ಪ್ರಶಸ್ತಿ ಪುರಸ್ಕೃತ ಲಲಿತಾ ಕೆರಿಮನಿಯವರಿಗೆ ಸಮಾಜದ ಪರವಾಗಿ 'ಸುಕೃತಿಮಾ' ಪ್ರಶಸ್ತಿಯನ್ನ ವೀರಶೈವ ಲಿಂಗಾಯತ ಪಂಚಮಸಾಲಿ ಸಂಘದ ಮಹಿಳಾ ಘಟಕದ ರಾಜ್ಯಾಧ್ಯಕ್ಷೆ ವಸಂತಾ ಹುಲ್ಲತ್ತಿ ಪ್ರದಾನ ಮಾಡಿದರು. ಸಭೆಯ ಅಧ್ಯಕ್ಷತೆಯನ್ನು ಸುನೀತಾ ಮಂಜುನಾಥ ಮಾಗಡಿ ವಹಿಸಿದ್ದರು. ಕೃತಿಕಾ ಮಾಗಡಿ, ಸಮಾಜದ ತಾಲೂಕಾಧ್ಯಕ್ಷ ಮಂಜುನಾಥ ಮಾಗಡಿ ಸೇರಿದಂತೆ ಅನೇಕರಿದ್ದರು.

ಮುಕ್ತಾ ಕಳಸಾಪುರ, ರತ್ನಾ ಕುಂಬಾರ, ಸ್ನೇಹಾ ಹೊಟ್ಟಿ ಕಾರ್ಯಕ್ರಮ ನಿರ್ವಹಿಸಿದರು. ಜ್ಯೋತಿ ಗಾಯಕವಾಡ, ರೇಖಾ ಘೋರ್ಪಡೆ, ಮೈತ್ರಾದೇವಿ ಹಿರೇಮಠ, ಎ.ಎಸ್. ಬೆನ್ನಾಳ, ಜಾಧವ ನಿರ್ಣಾಯಕರಾಗಿದ್ದರು.

## ಮಾ.15 ರಂದು ಲೋಕಾಯುಕ್ತ ಜನ ಸಂಪರ್ಕ ಸಭೆ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಅವರ ನಿರ್ದೇಶನದಂತೆ ಕರ್ನಾಟಕ ಲೋಕಾಯುಕ್ತ, ಗದಗ ಕಚೇರಿಯ ಪೊಲೀಸ್ ಅಧಿಕಾರಿಗಳು ಮಾರ್ಚ್ 15ರ ಶನಿವಾರದಂದು ಬೆಳಿಗ್ಗೆ 10.30 ಗಂಟೆಯಿಂದ ಮಧ್ಯಾಹ್ನ 1.00 ಗಂಟೆಯವರೆಗೆ "ತಹಸೀಲ್ದಾರ್ ಕಚೇರಿ ಸಭಾಭವನ ಮುಂಡರಗಿಯಲ್ಲಿ" ಲೋಕಾಯುಕ್ತ ಜನ ಸಂಪರ್ಕ ಸಭೆ ಮತ್ತು ಸಾರ್ವಜನಿಕರಿಂದ ಅಹವಾಲು ಸ್ವೀಕಾರ ಕಾರ್ಯಕ್ರಮವನ್ನು ಏರ್ಪಡಿಸಲಾಗಿದ್ದು, ಸದರಿ ದಿನಾಂಕದಂದು ಸಾರ್ವಜನಿಕರಿಂದ ದೂರು/ಅಹವಾಲುಗಳನ್ನು ಸ್ವೀಕರಿಸಲಾಗುವುದು.ಸಾರ್ವಜನಿಕರು ತಮ್ಮ ಕುಂದು–ಕೊರತೆಗಳನ್ನು, ಅಹವಾಲುಗಳನ್ನು ಹಾಗೂ ತಮ್ಮ ಸರಕಾರಿ ಕೆಲಸಗಳಿಗೆ ಸಂಬಂಧಿಸಿದಂತೆ ಯಾವುದೇ ಸರಕಾರಿ ಕಚೇರಿಗಳಲ್ಲಿ ಸಾರ್ವಜನಿಕರ ಕೆಲಸ ಕಾರ್ಯಗಳನ್ನು ಮಾಡಿಕೊಡಲು ಅಧಿಕಾರಿಗಳು ಉದ್ದೇಶ ಪೂರ್ವಕವಾಗಿ ವಿಳಂಬ ಮಾಡುತ್ತಿರುವ ಬಗ್ಗೆ ಲಿಖಿತ ದೂರನ್ನು ದಾಖಲಿಸುವ ಬಗ್ಗೆ, ಸರಕಾರಿ ಅಧಿಕಾರಿಗಳು ಸರಕಾರದ ಯೋಜನೆಗಳ ಲಾಭವನ್ನು ಅರ್ಹ ಫಲಾನುಭವಿಗಳಿಗೆ ತಲುಪಿಸುವಲ್ಲಿ ಉದ್ದೇಶ ಪೂರ್ವಕ ತಾರತಮ್ಯ ಮಾಡುತ್ತಿರುವ ಬಗ್ಗೆ ಲಿಖಿತ ದೂರನ್ನು ದಾಖಲಿಸುವ ಬಗ್ಗೆ, ಸರಕಾರದ ಯೋಜನೆಗಳ ಅನುಷ್ಠಾನದಲ್ಲಿ ಅನಗತ್ಯ ವಿಳಂಬ, ಕಳಪೆ ಕಾಮಗಾರಿ ನಡೆಸಿ ಹಣ ದುರುಪಯೋಗಪಡಿಸಿದ ದೂರುಗಳ ಬಗ್ಗೆ ಲಿಖಿತ ದೂರನ್ನು ದಾಖಲಿಸುವ ಬಗ್ಗೆ, ಸಾರ್ವಜನಿಕರ ಕೆಲಸ ಕಾರ್ಯಗಳನ್ನು ನಿಗದಿತ ಸಮಯದೊಳಗೆ ಮಾಡಿಕೊಡದೆ, ಅಕ್ರಮ ಸಂಭಾವನೆ (ಲಂಚದ ಹಣ)ಯ ಸಲುವಾಗಿ ಅನಗತ್ಯ ವಿಳಂಬ ಮಾಡುತ್ತಿದ್ದರೆ ಲಿಖಿತ ದೂರನ್ನು ದಾಖಲಿಸುವ ಬಗ್ಗೆ. ಯಾವುದೇ ಸರಕಾರಿ ಅಧಿಕಾರಿಯು ತಾನು ಕರ್ತವ್ಯ ನಿರ್ವಹಿಸಲು ನಿಯೋಜಿಸಿದ ಕರ್ತವ್ಯವನ್ನು ನಿರ್ವಹಿಸುವಲ್ಲಿ ದುರ್ವರ್ತನೆ ಪ್ರದರ್ಶಿಸುವಂತಹ ಅಧಿಕಾರಿಗಳ ಮೇಲೆ ಲಿಖಿತ ದೂರನ್ನು ದಾಖಲಿಸುವುದು, ಪ್ರಪತ್ರ 1 ಮತ್ತು 2 ರಲ್ಲಿ ಅಫಿಡವಿಟ್‌ನೊಂದಿಗೆ ಅಗತ್ಯ ದಾಖಲಾತಿಗಳೊಂದಿಗೆ ಲಿಖಿತ ದೂರನ್ನು ಸಲ್ಲಿಸಬಹುದಾಗಿದೆ ಎಂದು ಕರ್ನಾಟಕ ಲೋಕಾಯುಕ ಆರಕ್ಷಕ ಉಪ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಗದಗ–ಬೆಟಗೇರಿ: ಆಸ್ತಿ ಮಾಲಿಕರ ಗಮನಕ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ–ಬೆಟಗೇರಿ ನಗರಸಭೆ ವಾಪ್ತಿಯಲ್ಲಿ ಬರುವ ಆಸ್ತಿ ಮಾಲಿಕರು ಆಸ್ತಿ ತೆರಿಗೆಯನ್ನು ನಿರ್ಧರಣೆಗೊಳಿಸಿಕೊಂಡು ಇ ಆಸ್ತಿ ಪಡೆದುಕೊಳ್ಳುವುದು ಅವಶ್ಯವಿರುತ್ತದೆ. ಈ ಸಂಬಂಧ ಕರ್ನಾಟಕ ಅಧಿನಿಯಮ 19 ರ ಸೆಕ್ಷನ್ 106 ರಂತೆ ನಮೂನೆ 03 ಅಧಿಕೃತ ನಕಲುಗಳನ್ನು ಹಾಗೂ ರಿಜಿಸ್ಟರ್ ಬಿ (ನಮೂನೆ 3ಎ ) ಅನಧಿಕೃತ ಸ್ವತ್ತುಗಳ ವಹಿಯನ್ನು ನಿರ್ವಹಿಸಬೇಕಾಗಿರುವುದರಿಂದ ನಗರಸಭೆ ವಾಪ್ತಿಯ ಎಲ್ಲಾ ಆಸ್ತಿಗಳ ಮಾಲಿಕರು ಈ ಕೆಳಕಂಡ ದಾಖಲಾತಿಗಳನ್ನು ಮಾರ್ಚ್–2025ರ ಅಂತ್ಯದೊಳಗೆ ಕಚೇರಿಗೆ ಸಲ್ಲಿಸಬೇಕಾಗಿದೆ.

ದಾಖಲಾತಿಗಳು; ಮಾಲಿಕತ್ವ ದೃಢೀಕರಿಸುವ ನೋಂದಾಯಿತ ದಾಖಲೆ, ಸ್ವತ್ತಿನ ಋಣಭಾರ ಪ್ರಮಾಣ ಪತ್ರ ( ನಮೂನೆ 15 ರಲ್ಲಿ ). ಆಸ್ತಿ ತೆರಿಗೆ ಪಾವತಿಸಿದ ರಶೀದಿ, ಸರ್ಕಾರದಿಂದ ವಿತರಿಸಿದ ಯಾವುದೇ ಬಗೆಯ ಗುರುತಿನ ಚೀಟಿ, (ಪ್ಯಾನ್ ಕಾರ್ಡ್, ವೋಟರ್ ಐಡಿ). ಸ್ವತ್ತಿನ ಜಿ. ಪಿ. ಎಸ್, ಛಾಯಾ ಚಿತ್ರ, ಆಸ್ತಿ ಮಾಲಿಕರು ಫೋಟೋ.

ಹೆಚ್ಚಿನ ಮಾಹಿತಿಗಾಗಿ ಕಚೇರಿ ಸಮಯದಲ್ಲಿ ಕಂದಾಯ ನಿರೀಕ್ಷಕರು ಅಥವಾ ಕಂದಾಯ ಅಧಿಕಾರಿಗಳನ್ನು ಸಂಪರ್ಕಿಸಬೇಕು. ಸಹಾಯ ವಾಣಿ : 08372–278504 ಆಗಿರುತ್ತದೆ ಎಂದು ಗದಗ– ಬೆಟಗೇರಿ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳು, ಸೇವಾ ನಿವೃತ್ತಿ ಹೊಂದಿದ ಮುಖ್ಯೋಪಾಧ್ಯಾಯ ಎಂ.ಬಿ. ಹೊಸಮನಿಯವರಿಗೆ ಬೀಳ್ಕೊಡುಗೆ

# ಪರೀಕ್ಷೆಯ ಭಯ ಹೋಗಲಾಡಿಸಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳು ಶ್ರದ್ಧೆಯಿಂದ ಓದಿದಲ್ಲಿ ಉತ್ತಮ ಫಲಿತಾಂಶ ಗಳಿಸಲು ಸಾಧ್ಯ. ಶಿಕ್ಷಕರು/ಪಾಲಕರು ಮಕ್ಕಳಲ್ಲಿನ ಪರೀಕ್ಷೆಯ ಭಯ ಹೋಗಲಾಡಿಸಬೇಕು ಎಂದು ಡಿಡಿಪಿಐ ಆರ್.ಎಸ್. ಬುರಡಿ ಹೇಳಿದರು.

ಅವರು ತಾಲೂಕಿನ ಪು.ಬಡ್ನಿಯ ಸಿ.ಚ. ಹರದಗಟ್ಟಿ ಪ್ರೌಢಶಾಲೆಯಲ್ಲಿ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳಿಗೆ ಹಾಗೂ ಸೇವಾ ನಿವೃತ್ತಿ ಹೊಂದಿದ ಮುಖ್ಯೋಪಾಧ್ಯಾಯ ಎಂ.ಬಿ. ಹೊಸಮನಿ ಅವರ ಬೀಳ್ಕೊಡುಗೆ ಕಾರ್ಯಕ್ರಮದಲ್ಲಿ ಮಾತನಾಡಿದರು.

ಶಿಕ್ಷಕರು ಮಕ್ಕಳಲ್ಲಿ ಆತ್ಮವಿಶ್ವಾಸ ಬೆಳೆಸಬೇಕು. ಮುಖ್ಯೋಪಾಧ್ಯಾಯ ಎಂ.ಬಿ. ಹೊಸಮನಿ ಅವರು ಸೇವಾ ನಿವೃತ್ತಿ ಹೊಂದಿದ ಮೇಲೆ ಶಿಕ್ಷಣದ ಮೇಲೆ ಇರುವ ಪ್ರೀತಿ ಕಳೆದುಕೊಳ್ಳದೇ ಮಕ್ಕಳಿಗೆ ಮಾರ್ಗದರ್ಶನ ಮಾಡುವಂತಾಗಬೇಕು. ತಮ್ಮಲ್ಲಿನ ಜ್ಞಾನವನ್ನು ಹಂಚುವ ಮೂಲಕ ಮಕ್ಕಳ ಆತ್ಮವಿಶ್ವಾಸ ಬೆಳೆಸಬೇಕು ಎಂದು ಹೇಳಿದರು.




ಜಿ.ಪಂ ಮಾಜಿ ಸದಸ್ಯ ಎಂ.ಎಸ್. ದೊಡ್ಡಗೌಡರ ಮಾತನಾಡಿ, ವಿದ್ಯಾರ್ಥಿಗಳು ಪರೀಕ್ಷೆಯಲ್ಲಿ ಉತ್ತಮ ಅಂಕಗಳನ್ನು ಪಡೆದು ತಮ್ಮ ಭವಿಷ್ಯದ ಜೀವನದಲ್ಲಿ ಯಶಸ್ಸು ಸಾಧಿಸಬೇಕು. ಸತತ ಅಧ್ಯಯನ ಹಾಗೂ ಕಠಿಣ ಪರಿಶ್ರಮ ಎಲ್ಲವನ್ನೂ ಸುಲಭಗೊಳಿಸುತ್ತದೆ. ಎಂ.ಬಿ. ಹೊಸಮನಿ ಅವರ ನಿವೃತ್ತ ಜೀವನವು ನೆಮ್ಮದಿಯಿಂದ ಕೂಡಿರಲಿ ಎಂದು ಹೇಳಿದರು.

ಗದಗ ಗ್ರಾಮೀಣ ಬಿಇಓ ವಿ.ವಿ. ನಡುವಿನಮನಿ 'ಸ್ನೇಹ ಜೀವಿ' ಪುಸ್ತಕ ಬಿಡುಗಡೆಗೊಳಿಸಿ ಮಾತನಾಡಿ, ವಿದ್ಯಾರ್ಥಿ ಜೀವನ ಹೂವಿನ ಹಾಸಿಗೆಯಲ್ಲ ಎಂದರಲ್ಲದೆ, ಪರೀಕ್ಷಾ ಸಮಯದಲ್ಲಿ ಯಾವ ರೀತಿ ಅಭ್ಯಾಸ ಮಾಡಬೇಕು ಹಾಗೂ ಹೆಚ್ಚಿನ ಅಂಕ ಗಳಿಸುವ ಬಗೆ ಹೇಗೆ ಎಂಬುದನ್ನು ತಿಳಿಸಿದರು.

ಸಭೆಯಲ್ಲಿ ಗ್ರಾಮದ ಶೇಖಣ್ಣ ಕರೆಣ್ಣವರ, ಮುತ್ತಣ್ಣ ಚೋಟಗಲ್ಲ, ಪರಮೇಶ್ವರಪ್ಪ ಹರದಗಟ್ಟಿ ಮಾತನಾಡಿದರು. ವೇದಿಕೆಯಲ್ಲಿ ಚನ್ನಪ್ಪ ಕೋಲಕಾರ, ನಿವೃತ್ತ ಮುಖ್ಯೋಪಾಧ್ಯಾಯ ಎಂ.ಬಿ. ಹೊಸಮನಿ ಸೇರಿದಂತೆ ಅನೇಕರು ಇದ್ದರು. ಮುಖ್ಯೋಪಾಧ್ಯಾಯೆ ಜಯಶ್ರೀ ಹೊಸಮನಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಜಿ.ಎಸ್. ಪಾಟೀಲ ಸ್ವಾಗತಿಸಿದರು. ಜೆ.ಎಸ್. ರಾಮಶೆಟ್ಟರ ಹಾಗೂ ಅಶೋಕ ಸೊರಟೂರ ಕಾರ್ಯಕ್ರಮ ನಿರೂಪಿಸಿದರು. ಎಚ್.ಎಫ್. ನದಾಫ್ ವಂದಿಸಿದರು.

ಡಯಟ್ ಪ್ರಾಚಾರ್ಯ ಜೆ.ಎಲ್. ಬಾರಾಟಕ್ಕೆ ಮಾತನಾಡಿ, ವಿದ್ಯಾರ್ಥಿಗಳು ತಮ್ಮ ಜೀವನದ ಅಮೂಲ್ಯ ಸಮಯವನ್ನು ಹಾಳು ಮಾಡಿಕೊಳ್ಳದೆ ಸದುಪಯೋಗ ಪಡಿಸಿಕೊಳ್ಳಬೇಕು. ಕಠಿಣ ಪರಿಶ್ರಮದಿಂದ ಓದುವ ಮೂಲಕ ತಂದೆ–ತಾಯಿಗಳ ಕನಸನ್ನು ನನಸು ಮಾಡುವ ಕಾರ್ಯ ಮಾಡಬೇಕು ಎಂದು ಹೇಳಿದರು.

## ದೃಢೀಕೃತ ಘೋಷಣೆ ಸಲ್ಲಿಸಲು ಸೂಚನೆ

■ ವಿಜಯಸಾಕ್ಷಿ ಸುದ್ದಿ, ಗದಗ

ವಕ್ಫ್ ಸಂಸ್ಥೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಪೇಶ ಇಮಾಮ ಹಾಗೂ ಮೌಜ್ಜಿನರವರಿಗೆ ಸರಕಾರದಿಂದ ನೀಡಲಾಗುತ್ತಿರುವ ಮಾಸಿಕ ಗೌರವಧನವನ್ನು ಜನವರಿ 2025ರಿಂದ ಸೇವಾ ಸಿಂಧು ತಂತ್ರಾಂಶದ ಮೂಲಕ ವಿತರಿಸುವ ನಿರ್ಧಾರ ಕೈಗೊಂಡಿರುವ ಹಿನ್ನೆಲೆಯಲ್ಲಿ ಕರ್ನಾಟಕ ರಾಜ್ಯ ವಕ್ಫ್ ಮಂಡಳಿಯ ನಿರ್ದೇಶನದಂತೆ ವಕ್ಫ ಸಂಸ್ಥೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಪೇಶ ಇಮಾಮ ಹಾಗೂ ಮೌಜ್ಜಿನ ರವರ ಧೃಡಿಕೃತ ಘೋಷಣೆ ನಿಗದಿತ ನಮೂನೆಯಲ್ಲಿ ಸಲ್ಲಿಸುವ ಅವಶ್ಯಕವಾಗಿರುತ್ತದೆ. ಸೇವಾ ಸಿಂಧು ತಂತ್ರಾಂಶದಲ್ಲಿ ಮೇಲಿನ ವಿವರಗಳನ್ನು ಸಲ್ಲಿಸಿದವರಿಗೆ ಮಾತ್ರ ಗೌರವಧನ ವಿತರಣೆ ಮಾಡಲಾಗುವುದೆಂದು ಜಿಲ್ಲಾ ವಕ್ಫ್ ಅಧಿಕಾರಿಗಳು ತಿಳಿಸಿದ್ದಾರೆ.

ದೃಢೀಕೃತ ಪತ್ರವನ್ನು ಕಾರ್ಯಾಲಯದಿಂದ ಪಡೆದುಕೊಂಡು ಮಾರ್ಚ್ 31ರ ಒಳಗಾಗಿ ಬೆಳಿಗ್ಗೆ 10-30ರಿಂದ ಸಾಯಂಕಾಲ 5-30ರವರೆಗೆ ಖುದ್ದಾಗಿ ತಾಲೂಕಿನ ಎಲ್ಲಾ ವಕ್ಫ್ ಸಂಸ್ಥೆಯ ಅಧ್ಯಕ್ಷರು / ಕಾರ್ಯದರ್ಶಿರವರು ಪೇಶ ಇಮಾಮ ಹಾಗೂ ಮೌಜ್ಜಿನರವರ ಜೊತೆಗೆ ಜಿಲ್ಲಾ ವಕ್ಫ್ ಕಾರ್ಯಾಲಯ, ಮೌಲಾನಾ ಆಜಾಧ ಭವನ ಗದಗ ಇಲ್ಲಿಗೆ ಹಾಜರಾಗಿ ಸಲ್ಲಿಸಲು ಸೂಚಿಸಿದೆ.

**ಸಲ್ಲಿಸಬೇಕಾದ ದಾಖಲಾತಿಗಳು:** ದೃಢೀಕೃತ ಘೋಷಣೆ (ನಿಗದಿತ ನಮೂನೆ) ಮಸೀದಿಯ ಲೆಟರ್ ಹೆಡನಲ್ಲಿ, ಪೇಶ ಇಮಾಮ/ಮೌಜ್ಜನರವರ ಆಧಾರ್ ಕಾರ್ಡ್ ಪ್ರತಿ, 1 ಫೋ-ಟೊ ಹಾಗೂ ಆಧಾರ್‌ನಲ್ಲಿರುವ ನಮೂದಿಸಿರುವ ಮೊಬೈಲ್ ಜೊತೆಗೆ ಹಾಜರಾಗುವುದು. ಅಧ್ಯಕ್ಷರು/ ಕಾರ್ಯದರ್ಶಿಗಳು/ ಆಡಳಿತಾಧಿಕಾರಿಗಳವರ ಆಧಾರ್ ಕಾರ್ಡ್ ಹಾಗೂ ಆಧಾರ್‌ನಲ್ಲಿರುವ ಮೊಬೈಲ್ ಜೊತೆಗೆ ಹಾಜರಾಗಬೇಕೆಂದು ಜಿಲ್ಲಾ ವಕ್ಫ್ ಸಲಹಾ ಸಮಿತಿಯ ಅಧ್ಯಕ್ಷ ಜಿ.ಎಮ್. ದಂಡಿನ ಪ್ರಕಣೆಯಲ್ಲಿ ತಿಳಿಸಿದ್ದಾರೆ.

ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತಿ ಯುಗಮಾನೋತ್ಸವದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು

# ಹಂಚಿ ಉಣ್ಣುವುದು ಭಾರತೀಯ ಸಂಸ್ಕೃತಿ

■ ವಿಜಯಸಾಕ್ಷಿ ಸುದ್ದಿ, ಬಾಳೆಹೊನ್ನೂರು

ಮನುಷ್ಯನ ಜೀವನಾಧಾರಕ್ಕೆ ನೀರು, ಅನ್ನ, ಗಾಳಿ ಮುಖ್ಯವಾಗಿರುವಂತೆ ಆದರ್ಶ ವ್ಯಕ್ತಿಯಾಗಿ ಬಾಳಲು ಸಜ್ಜನರ ನುಡಿಗಳು ಮುಖ್ಯ. ಹಸಿದು ಉಣ್ಣುವುದು ಪ್ರಕೃತಿಯ ಧರ್ಮ. ಹಂಚಿ ಉಣ್ಣುವುದು ಸಂಸ್ಕೃತಿಯ ಲಕ್ಷಣವೆಂದು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು. ಅವರು ಮಂಗಳವಾರ ಸಂಜೆ ಶ್ರೀ ಜಗದ್ಗುರು ರಂಭಾಪುರಿ ಪೀಠದಲ್ಲಿ ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತಿ ಯುಗಮಾನೋತ್ಸವ ಹಾಗೂ ಕ್ಷೇತ್ರನಾಥ ಶ್ರೀ ವೀರಭದ್ರಸ್ವಾಮಿ ಮಹಾರಥೋತ್ಸವದ ಅಂಗವಾಗಿ ಜರುಗಿದ ಕೃಷಿ ಮೇಳ, ಚಿಂತನ-ಮಂಥನ ಸಮಾರೋಪ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು. ಕೃಷಿ ಪ್ರಧಾನವಾದ ಭಾರತ ದೇಶದಲ್ಲಿ ರೈತರ ಪಾತ್ರ ಬಹು ಮುಖ್ಯವಾದುದು. ಸಾಂಪ್ರದಾಯಕವಾಗಿ ಬೆಳೆದು ಬಂದ ಕೃಷಿ ಇಂದು ಆಧುನಿಕ ವ್ಯವಸ್ಥೆಯಲ್ಲಿ ಬಹಳಷ್ಟು ಪ್ರಗತಿಪಥದಲ್ಲಿ ನಡೆಯುತ್ತಿದೆ. ಶ್ರೀಮಂತ ರೈತರಿಗೆ ಮಾತ್ರ ಆಧುನಿಕ ಸೌಲಭ್ಯ ಕೃಷಿ ಮಾಡಲು ಸಾಧ್ಯ. ಸಾಮಾನ್ಯ ಬಡ ರೈತ ಉದ್ಧಾರವಾಗಲು ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಪ್ರಾಮಾಣಿಕ ಪ್ರಯತ್ನ ಮಾಡುವ ಅವಶ್ಯಕತೆಯಿದೆ.



ಮಲೆನಾಡಿನ ಪ್ರಮುಖ ಬೆಳೆಗಳಾದ ಕಾಫಿ, ಅಡಿಕೆ ಮತ್ತು ಮೆಣಸು ಇನ್ನಿತರ ಉಪ ಬೆಳೆಗಳನ್ನು ಬೆಳೆಸುವ ನಿಟ್ಟಿನಲ್ಲಿ ರೈತರು ಶ್ರಮವಹಿಸಿ ದುಡಿಯುತ್ತಿದ್ದಾರೆ. ಆದರೆ ಕೆಲವು ಸಂದರ್ಭದಲ್ಲಿ ಮಳೆ-ಬೆಳೆಯಿಲ್ಲದೇ, ಯೋಗ್ಯ ಬೆಲೆ ಸಿಗದೇ ಸಾಲದ ಸುಳಿಯಲ್ಲಿ ಸಿಕ್ಕು ನಲುಗಿದವರೂ ಉಂಟು. ಕಡಿಮೆ ವೆಚ್ಚದಲ್ಲಿ ಹೆಚ್ಚು ಆದಾಯ ಬರುವ ಬೆಳೆಗಳನ್ನು ಬೆಳೆಸುವತ್ತ ರೈತರು ಗಮನ ಹರಿಸಬೇಕಾಗಿದೆ ಎಂದರು. ಸಮಾರಂಭ ಉದ್ಘಾಟಿಸಿದ ಭದ್ರಾ ಕಾಡಾ ಅಧ್ಯಕ್ಷ ಡಾ. ಕೆ.ಪಿ. ಅಂಶುಮಂತ್ ಮಾತನಾಡಿ, ಪ್ರಪಂಚ ಅನ್ನುವುದು ಗುಲಾಬಿ ಗಿಡದಂತೆ. ಮೂರ್ಖರು ಮುಳ್ಳನ್ನು, ಸಜ್ಜನರು ಹೂವನ್ನು ಪಡೆಯುತ್ತಾರೆ. ಸ್ವಾರ್ಥ ರಹಿತ ಬದುಕಿಗೆ ಬೆಲೆಯಿದೆ. ಶ್ರಮದಿಂದ ಗಳಿಸಿದ ಸಂಪತ್ತು ಸ್ಥಿರವಾಗಿರುತ್ತದೆ. ಶ್ರಮವಿಲ್ಲದ ಸಂಪತ್ತು ಬಯಸುವ ಜನ ಹೆಚ್ಚಾಗಿದ್ದಾರೆ. ರೈತನ ಬೆವರಿಗೆ ಬೆಲೆ ಬರುವಂತಾಗಬೇಕು. ಶ್ರೀ ರಂಭಾಪುರಿ ಪೀಠದಲ್ಲಿ ಕೃಷಿ ಮೇಳ ಹಮ್ಮಿಕೊಂಡು ರೈತ ಪರವಾದ ಚಿಂತನ-ಮಂಥನ ನಡೆಯುತ್ತಿರುವುದು ಒಳ್ಳೆಯ ಬೆಳವಣಿಗೆ ಎಂದು ಹರುಷ ವ್ಯಕ್ತಪಡಿಸಿದರು. ಡಾ. ಮಮತಾ ರಾಣಿ ಸಂಶೋಧಿತ 'ಅವಿಭಜಿತ ಬೆಂಗಳೂರು ಜಿಲ್ಲೆಯ ವೀರಭದ್ರ ಆರಾಧನೆ-ಒಂದು ಅಧ್ಯಯನ' ಕೃತಿಯನ್ನು ರಾಯಚೂರಿನ ಡಾ.ಚನ್ನಬಸವಯ್ಯ ಹಿರೇಮಠ ಬಿಡುಗಡೆ ಮಾಡಿದರು. ಇದೇ ಸಂದರ್ಭದಲ್ಲಿ ಕೃತಿಕಾರರಾದ ಡಾ. ಮಮತಾ ರಾಣಿ ಹಾಗೂ ಅಚಲೇರಿ ಹಿರೇಮಠದ ಸೂತ್ರೇಶ್ವರ ಶಿವಾಚಾರ್ಯ ಸ್ವಾಮಿಗಳನ್ನು ಸನ್ಮಾನಿಸಲಾಯಿತು. ಮುಖ್ಯ ಅತಿಥಿಗಳಾಗಿ ಭಾಸ್ಕರ ವೆನಿಲ್ಲಾ, ಎಸ್.ಹೆಚ್. ರಾಜಶೇಖರ್, ಹೆಚ್.ಎಂ. ಲೋಕೇಶ್, ಬಿ.ಸಿ. ಗೀತಾ, ಟಿ.ಎಂ. ಉಮೇಶ ಕಲ್ಮಕ್ಕಿ, ಬಿ.ಎಸ್. ನಾಗರಾಜಭಟ್ ಭಾಗವಹಿಸಿದ್ದರು. ಎನ್.ಆರ್. ಪುರ ತಾಲೂಕು ಪತ್ರಕರ್ತರ ಸಂಘದ ಮಾಜಿ ಅಧ್ಯಕ್ಷ ಸತೀಶ್ ಜೈನ್ ಸಮ್ಮೇಳನದ ನಿರ್ಣಯ ಮಂಡಿಸಿದರು. ಚೈತನ್ಯ ವೆಂಕಿ ಶ್ರೀ ಜಗದ್ಗುರುಗಳಿಗೆ ಗೌರವ ಸಮರ್ಪಿಸಿದರು. ಬೀರೂರು ರುದ್ರಮುನಿ ಶಿವಾಚಾರ್ಯರು ಸ್ವಾಗತಿಸಿದರು. ಗಂಗಾಧರಸ್ವಾಮಿ ಹಿರೇಮಠ ವಿಠಲಾಪುರ ಪ್ರಾರ್ಥಿಸಿದರು. ಗಿರಿಜಾ ಕಲ್ಲೋಳಿಮಠ ಹಾಗೂ ಲಾವಣ್ಯ ಮಂಜುನಾಥ ನಿರೂಪಿಸಿದರು.

ನೇತೃತ್ವ ವಹಿಸಿದ ಸೂಡಿ ಜುಕ್ತಿ ಹಿರೇಮಠದ ಡಾ. ಕೊಟ್ಟೂರು ಬಸವೇಶ್ವರ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ ವೀರಶೈವ ಧರ್ಮ ಸಂಸ್ಕೃತಿ ಮಾನವ ಜನಾಂಗದ ವಿಕಾಸಕ್ಕೆ ಅಡಿಪಾಯ. ಎಲ್ಲ ವರ್ಗ, ಸಮುದಾಯದವರ ಏಳಿಗೆಯನ್ನು ಬಯಸಿದ ಧರ್ಮ ವೀರಶೈವ. ಶ್ರೀ ಜಗದ್ಗುರು ರೇಣುಕಾಚಾರ್ಯರ ಮೂಲ ತತ್ವ-ಸಿದ್ಧಾಂತಗಳ ನೆಲೆಯಲ್ಲಿ ಬಹಳಷ್ಟು ಆಧ್ಯಾತ್ಮ ಜೀವಿಗಳು ಉಜ್ವಲ ಬದುಕನ್ನು ಕಟ್ಟಿಕೊಂಡಿದ್ದಾರೆ ಎಂದರು.

# ಮಹಿಳೆಯರು ಸಾಮಾಜಿಕ ಕ್ಷೇತ್ರದಲ್ಲಿ ತೊಡಗಿಕೊಳ್ಳಿ

■ ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಮಹಿಳೆ ಎಲ್ಲ ಕ್ಷೇತ್ರಗಳಲ್ಲೂ ಪಾಲ್ಗೊಂಡು ಸಮಾಜದಲ್ಲಿ ಮುಖ್ಯವಾಹಿನಿಗೆ ಬಂದಿದ್ದು, ಇಂದು ಮಹಿಳೆ ಅಬಲೆಯಲ್ಲ, ಸಬಲೆಯಾಗಿದ್ದಾಳೆ ಎಂದು ಮಲ್ಲಿಕಾರ್ಜುನ ಮಹಿಳಾ ಸಂಘದ ಅಧ್ಯಕ್ಷೆ ಕಸ್ತೂರೆವ್ವ ಕಲಕೇರಿ ಹೇಳಿದರು.

ಇಲ್ಲಿಯ ಮಲ್ಲಿಕಾರ್ಜುನ ದೇವಸ್ಥಾನದ ಆವರಣದಲ್ಲಿ ಮಲ್ಲಿಕಾರ್ಜುನ ಮಹಿಳಾ ವಿವಿಧೋದ್ದೇಶಗಳ ಹಾಗೂ ಕಲಾಭಿವೃದ್ಧಿ ಸಂಘವು ಹಮ್ಮಿಕೊಂಡಿದ್ದ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸಂಘದ ಕೋಶಾಧ್ಯಕ್ಷೆ ಸಾವಿತ್ರಿ



ಯಲಿಶಿರುಂದ ಮಾತನಾಡಿ, ಮಹಿಳೆಯರು ತಮ್ಮಲ್ಲಿರುವ ಕೀಳರಿಮೆಯನ್ನು ತೊರೆದು ಸಾಮಾಜಿಕ ಕಾರ್ಯ ಚಟುವಟಿಕೆಯಲ್ಲಿ ಭಾಗವಹಿಸಬೇಕು. ಸ್ಥಳಿಯವಾಗಿ ಇರುವ ಗ್ರಾಮ ಪಂಚಾಯಿತಿಯಲ್ಲಿ ಇರುವ ಸರಕಾರದ ಸಾಲ ಸೌಲಭ್ಯ, ಉದ್ಯೋಗದ ಬಗ್ಗೆ ಮಾಹಿತಿ ಪಡೆದುಕೊಳ್ಳಬೇಕು ಎಂದರು.

ಅನ್ನಪೂರ್ಣ ಪತ್ತಾರ, ಕವಿತಾ ಮುದ್ದಿಕೋಲ ಅವರು ಸಾಧನೆ ಮಾಡಿದ ಮಹಿಳೆಯರ ಕುರಿತು ವಿವರಿಸಿದರು. ಶರಣಮ್ಮ ಕಳ್ಳಿಮಠ, ಶಾಂತಮ್ಮ ಬಡಿಗೇರ, ಪುಷ್ಪಾ ಶಲವಡಿ, ಲಲಿತಾ ಕುಲಕರ್ಣಿ, ಪಾರ್ವತಿ ಮಾಯಾಕರಮಠ, ಜ್ಯೋತಿ ಪಟ್ಟೇದ, ಅನ್ನಪೂರ್ಣ ಹೂಸೂರು, ವೀರಮ್ಮ ಮೇಟಿ ಸೇರಿದಂತೆ ಸಂಘದ ಸದಸ್ಯರು ಭಾಗವಹಿಸಿದ್ದರು. ಲಲಿತಾ ಕುಲಕರ್ಣಿ, ಕಸ್ತೂರೆವ್ವ ಹಡಗಲಿ, ಅನಿತಾ ಗೊತಗಿ ಪ್ರಾರ್ಥಿಸಿದರು. ಬಸಮ್ಮ ರಮಣಿ ಸ್ವಾಗತಿಸಿದರು. ಕಾರ್ಯದರ್ಶಿ ನಾಗರತ್ನ ಹಡಗಲಿ ವಂದಿಸಿದರು.

# ಬೆಂಕಿ ರಹಿತ ಅಡುಗೆ ಸ್ಪರ್ಧೆ



■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಸರಾಫ್ ಬಝಾರ್‌ನ ಅಂಬಾಭವಾನಿ ದೇವಸ್ಥಾನದ ಸಭಾಂಗಣದಲ್ಲಿ ಸಮಾಜದ ಮಹಿಳೆಯರಿಗಾಗಿ ಬೆಂಕಿ ರಹಿತ ಅಡುಗೆ ಸ್ಪರ್ಧೆ, ಸ್ವಯಂ ಕೇಶಾಲಂಕರ ಸ್ಪರ್ಧೆಯನ್ನು ಆಯೋಜಿಸಲಾಗಿತ್ತು. ವಿದ್ಯಾ ಎಸ್.ಕಬಾಡಿ ನಿರ್ಣಾಯಕರಾಗಿ ಆಗಮಿಸಿದ್ದರು. ವಿಜೇತರಾದವರಿಗೆ ಬಹುಮಾನ ಘೋಷಿಸಲಾಯಿತು.

ಈ ಎಲ್ಲಾ ಕಾರ್ಯಕ್ರಮಗಳ ಮುಂದಾಳತ್ವವನ್ನು ಮಹಿಳಾ ಮಂಡಳದ ಅಧ್ಯಕ್ಷೆ ಉಮಾಬಾಯಿ ಬೇವಿನಕಟ್ಟಿ, ಉಪಾಧ್ಯಕ್ಷೆ ಸ್ನೇಹಾಲತಾ ಕಬಾಡಿ, ಕಾರ್ಯದರ್ಶಿ ರೇಖಾ ಬೇವಿನಕಟ್ಟಿ, ಸಹಕಾರ್ಯದರ್ಶಿ ಗೀತಾ ಹಬೀಬ್ ಮತ್ತು ಖಜಾಂಚಿ ಕಸ್ತೂರಬಾಯಿ ಭಾಂಡಗೆ ವಹಿಸಿಕೊಂಡಿದ್ದರು.

ಮಂಡಳದ ಸದಸ್ಯರಾದ ರೇಣುಕಾಬಾಯಿ ಕಲಬುರ್ಗಿ, ಲಲಿತಾಬಾಯಿ ಬಾಕಳೆ, ಭಾವನಾ ಭಾಂಡಗೆ, ರೇಖಾ ಖಟವಟೆ, ಅನ್ನಪೂರ್ಣಾ ಶಿದ್ಲಿಂಗ್, ಸುಶೀಲಾ ದಲಬಂಜನ್, ಶೋಭಾಬಾಯಿ ಭಾಂಡಗೆ, ಶಾಂತಾಬಾಯಿ ಬಾಕಳೆ, ರತ್ನಾಬಾಯಿ ಹಬೀಬ್ ಮತ್ತು ಮಂಜುಳಾ ಬಾಕಳೆ ಹಾಜರಿದ್ದರು.

## ದಾನಿಗಳಿಂದ ಸರಕಾರಿ ಶಾಲೆಗಳ ಸಬಲೀಕರಣ



■ ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಸ್ಥಳೀಯ ಬಾಲಕಿಯರ ಸರಕಾರಿ ಪ್ರೌಢಶಾಲೆಯಲ್ಲಿ ಸರಸ್ವತಿ ಪೂಜಾ ಸಮಾರಂಭ, ಎಸ್.ಎಸ್.ಎಲ್.ಸಿ ವಿದ್ಯಾರ್ಥಿನಿಯರ ಬೀಳ್ಕೊಡುಗೆ ಹಾಗೂ ರಂಗೋತ್ಸವ ಕಾರ್ಯಕ್ರಮಗಳು ಜರುಗಿದವು.

ಸಮಾರಂಭದಲ್ಲಿ ಗ್ರಾಮ ಪಂಚಾಯಿತಿ ಅಧ್ಯಕ್ಷ ಕೆ.ಎಸ್. ಪೂಜಾರ ಮಾತನಾಡಿ, ಮಕ್ಕಳು ಗುಣಮಟ್ಟದ ಶಿಕ್ಷಣವನ್ನು ಪಡೆಯುವ ಮೂಲಕ ದೇಶದ ಅಭಿವೃದ್ಧಿಯಲ್ಲಿ ಪ್ರಮುಖ ಪಾತ್ರ ವಹಿಸಬೇಕು ಎಚಿದರಲ್ಲದೆ, ಶಾಲೆಗೆ ಸುಮಾರು 20 ಸಾವಿರ ರೂ ಮೌಲ್ಯದ ಸಂಚಾರಿ ಧ್ವನಿವರ್ಧಕಗಳನ್ನು ಕೊಡುಗೆಯಾಗಿ ನೀಡಿದ ಮಹನೀಯರನ್ನು ಸನ್ಮಾನಿಸಿ ದಾನಿಗಳಿಂದ ಸರಕಾರಿ ಶಾಲೆಗಳು ಸಬಲೀಕರಣದತ್ತ ಸಾಗುತ್ತಿರುವುದು ಹೆಮ್ಮೆಯ ಸಂಗತಿಯಾಗಿದೆ ಎಂದರು.

ದಾನಿಗಳಾದ ಲಲಿತಾ ಮುಸ್ಕಿನಭಾವಿ, ಶಾಂತವ್ವ ಆಲೂರ, ಜಯಶ್ರೀ ಬಿಳ್ಳಾಳ, ಮಾಂತೇಶ ಕುಂಬಾರ, ಮಹಾದೇವಪ್ಪ ಈಟಿ, ರಮೇಶ ಅಬ್ಬಿಗೇರಿ, ರಾಜೇಸಾಬ ಗುಡಗೇರಿ, ಶಿವಪ್ಪ ಕಳಸದ, ಮಹಮ್ಮದ್‌ರಫೀಕ್ ಕಲಾದಗಿ, ಮಂಜಣ್ಣ ಬೂದಿಹಾಳ ಹಾಗೂ 2024ರ ಎಸ್.ಎಸ್.ಎಲ್.ಸಿ ವಾರ್ಷಿಕ ಪರೀಕ್ಷೆಯಲ್ಲಿ ಶಾಲೆಗೆ ಕೀರ್ತಿ ತಂದ ವಿದ್ಯಾರ್ಥಿನಿಯರನ್ನು ಸನ್ಮಾನಿಸಲಾಯಿತು.

ವಿವಿಧ ಸ್ಪರ್ಧೆಯಲ್ಲಿ ವಿಜೇತ ಮಕ್ಕಳಿಗೆ ಬಹುಮಾನ ವಿತರಿಸಲಾಯಿತು. ಮುಖ್ಯೋಪಾಧ್ಯಾಯ ವಾಯ್. ಹೆಚ್. ತಕ್ಕಲಕೋಟಿ ಅಧ್ಯಕ್ಷತೆ ವಹಿಸಿದ್ದರು. ಎಸ್.ಡಿ.ಎಂ.ಸಿ ಅಧ್ಯಕ್ಷ ಮಹಾಂತೇಶ ಕುಂಬಾರ, ನಿವೃತ್ತ ಮುಖ್ಯೋಪಾಧ್ಯಾಯ ಸಿ.ಸಿ. ಕುರಹಟ್ಟಿ, ಶೋಭಾ ಮಲ್ಲಾಡದ, ಮಹಾದೇವಪ್ಪ ಈಟಿ, ಮಾಬೂಬಿ ಗುದಗನವರ, ಲಲಿತಾ ಮುಸ್ಕಿನಭಾವಿ, ಪಾರ್ವತಿ ಮಾಡಲಗೇರಿ, ಅನಸಮ್ಮ ಅಂಬಕ್ಕಿ, ಮಂಜುನಾಥ ಬೂದಿಹಾಳ, ಕುಬೇರಪ್ಪ ಬೆಂತೂರ, ರಾಜೇಸಾಬ ಗುಡಗೇರಿ, ರಮೇಶ ಅಬ್ಬಿಗೇರಿ ಭಾಗವಹಿಸಿದ್ದರು.

ಎಸ್.ಹೆಚ್. ಶೆಟ್ಟಿನಾಯಕರ ಪ್ರಾಸ್ತಾವಿಕವಾಗಿ ಮಾತನಾಡಿದರು. ಕೆ.ವ್ಹಿ. ಮ್ಯಾಗೇರಿ ವರದಿ ವಾಚಿಸಿದರು. ಜೆ.ಎಫ್. ಜ್ಯೋತಿ ಬಹುಮಾನ ವಿತರಣಾ ಕಾರ್ಯಕ್ರಮ ನಡೆಸಿಕೊಟ್ಟರು. ಜೆ.ವಿ. ಹಿರೇಮಠ, ಎಸ್.ಇ. ಹಿರೇಮಠ, ಎಸ್.ಎ. ಮುಂಡೆವಾಡಿ, ಎಮ್. ಎಮ್. ಮುನಶಿ ಉಪಸ್ಥಿತರಿದ್ದರು. ಗಾಯತ್ರಿ ಹಳ್ಳಿ ಸ್ವಾಗತಿಸಿದರು, ವಾಯ್.ವಾಯ್. ಬೆಟಗೇರಿ ನಿರೂಪಿಸಿದರು. ಎ.ಎಸ್. ಕಳಸದ ವಂದಿಸಿದರು.

## ಮಾರಿಷಸ್‌ಗೆ ತೆರಳಿದ ಪ್ರಧಾನಿ ಮೋದಿ..
## ಮಣಿಪುರಕ್ಕೆ ಯಾವಾಗ? ಕಾಂಗ್ರೆಸ್ ಪ್ರಶ್ನೆ

■ ವಿಜಯಸಾಕ್ಷಿ ಸುದ್ದಿ, ಮಣಿಪು

ಮಾರಿಷಸ್ ಪ್ರವಾಸ ಕೈಗೊಂಡಿರುವ ಪ್ರಧಾನಿ ನರೇಂದ್ರ ಮೋದಿ ಅವರನ್ನು ಕಾಂಗ್ರೆಸ್ ಟೀಕಿಸಿದ್ದು, ಮಣಿಪುರಕ್ಕೆ ಯಾವಾಗ? ಎಂದು ಪ್ರಶ್ನಿಸಿದೆ. ಮಣಿಪುರದ ಜನರು ಪ್ರಧಾನಿಯ ಆಗಮನಕ್ಕಾಗಿ ಕಾಯುತ್ತಿದ್ದಾರೆ. ಆದರೆ, ಪ್ರಧಾನಿ ನಿರಂತರವಾಗಿ ವಿದೇಶ ಪ್ರವಾಸ ಕೈಗೊಳ್ಳುತ್ತಿದ್ದಾರೆ ಎಂದು ಕಾಂಗ್ರೆಸ್ ಹೇಳಿದೆ.

ಮಣಿಪುರದಲ್ಲಿ ರಾಷ್ಟ್ರಪತಿ ಆಳ್ವಿಕೆ ಹೇರಿದ ನಂತರವೂ ಪರಿಸ್ಥಿತಿ ಉದ್ವಿಗ್ನವಾಗಿದೆ. ಅಲ್ಲಿನ ಜನರು ಎರಡು ವರ್ಷಗಳಿಂದ ಪ್ರಧಾನಿಯ ಭೇಟಿಗಾಗಿ ಕಾಯುತ್ತಲೇ ಇದ್ದಾರೆ. ಪ್ರಧಾನಿ ಭೇಟಿ ನೀಡಲು ನಿರಾಕರಿಸುವುದು ಮಣಿಪುರದ ಜನರಿಗೆ ಮಾಡಿದ ಅವಮಾನ ಎಂದು ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ (ಸಂವಹನ) ಜೈರಾಮ್ ರಮೇಶ್ ಹೇಳಿದ್ದಾರೆ.

# ಮಕ್ಕಳನ್ನು ವಿದ್ಯಾವಂತರನ್ನಾಗಿ ಮಾಡಿ

■ ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಕಟ್ಟಡ ನಿರ್ಮಾಣ ಕಾರ್ಮಿಕ ಮಹಾಸಂಘದ ಕಚೇರಿಯಲ್ಲಿ ಪ್ಲಂಬರ್ ಅಸೋಸಿಯೇಶನ್ ಗದಗ-ಬೆಟಗೇರಿ ವತಿಯಿಂದ ವಿಶ್ವ ಪ್ಲಂಬರ್ ದಿನಾಚರಣೆಯನ್ನು ಆಚರಿಸಲಾಯಿತು. ರಾಜ್ಯೋತ್ಸವ ಪ್ರಶಸ್ತಿ ವಿಜೇತ ಡಾ. ಜಿ.ಬಿ. ಬಿಡಿನಹಾಳ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿ, ನಿಮ್ಮ ಮಕ್ಕಳನ್ನು ವಿದ್ಯಾವಂತರನ್ನಾಗಿ ಮಾಡಿ ಹಾಗೂ ತಾವು ಮಾಡುವ ಕೆಲಸದಲ್ಲಿ ಶ್ರದ್ಧೆಯಿಂದ ಮತ್ತು ಜಾಗೂರಕತೆಯಿಂದ ಕೆಲಸವನ್ನು ನಿರ್ವಹಿಸಬೇಕೆಂದು ಕರೆ ನೀಡಿದರು.

ಅತಿಥಿಗಳಾಗಿ ಜಿಲ್ಲಾ ಕಾರ್ಮಿಕ



ಅಧಿಕಾರಿ ಶ್ರೀಶೈಲ ಸೋಮನಕಟ್ಟಿ, ಅಧ್ಯಕ್ಷತೆಯನ್ನು ಪ್ಲಂಬರ್ ಅಸೋಸಿಯೇಶನ್ ಅಧ್ಯಕ್ಷ ಕೆ.ಬಿ. ಕುಡಗುಂಟಿ ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ಕನ್ಸಲ್ಟಿಂಗ್ ಸಿವ್ಹಿಲ್ ಇಂಜಿನಿಯರ್ಸ್ ಅಸೋಸಿಯೇಶನ್‌ನ ಜಿಲ್ಲಾಧ್ಯಕ್ಷ ಇಂ.ಎಂ.ಪಿ. ಪಾಟೀಲ, ಸರ್ ಎಂ.ವಿಶ್ವೇಶ್ವರಯ್ಯ ಸಿವಿಲ್ ಕನ್ಸಲ್ಟಂಟ್ ಆ್ಯಂಡ್ ಇಂಜಿನಿಯರ್ಸ್ ಫೋರಮ್‌ನ ಅಧ್ಯಕ್ಷ ಇಂ. ಬೂದೇಶ ಎಂ.ಬ್ಯಾಹಟ್ಟಿ, ಗದಗ ಜಿಲ್ಲಾ ಕಟ್ಟಡ ನಿರ್ಮಾಣ ಕಾರ್ಮಿಕರ ಮಹಾಸಂಘದ ಅಧ್ಯಕ್ಷ ಮೆಹಬೂಬಖಾನ ಪಠಾಣ, ಕಾರ್ಮಿಕರ ಕಲ್ಯಾಣ ಸಂಸ್ಥೆಯ ಅಧ್ಯಕ್ಷ ಮಹ್ಮದ ಇರ್ಫಾನ ಡಂಬಳ ವೇದಿಕೆಯಲ್ಲಿದ್ದರು.

ಸಂಸ್ಥಾಪಕ ಅಧ್ಯಕ್ಷ ಝುಡ್.ಡಿ. ಬೇಲೇರಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಕಾರ್ಯಕ್ರಮದಲ್ಲಿ ಅನಿಲ ಜಾಧವ, ಖಾಜೇಸಾಬ ಗಬ್ಬೂರ, ಶಂಭು ಹರ್ತಿ, ಬಾಲಕೃಷ್ಣ ಕಾಮತ, ಮನೋಜ ಬಾಫಣಾ ಸೇರಿದಂತೆ ಕಾರ್ಯಕಾರಿ ಮಂಡಳಿ ಸದಸ್ಯರಾದ ಇಸ್ಮಾಯಿಲ್ ಹರ್ಲಾಪೂರ, ಮಹ್ಮದಗೌಸ ಡಂಬಳ, ವೆಂಕಟೇಶ ಪೂಜಾರ, ಶಬ್ಬೀರ ಲಕ್ಷ್ಮೇಶ್ವರ, ಸಂಗಪ್ಪ ಕೋಳೂರ, ಇಸ್ಮಾಯಲ್ ಹಾರೋಗೇರಿ, ಈರಣ್ಣ ಲಕ್ಕುಂಡಿ, ಗುರುಸಂಗಪ್ಪ ಬೆಣಕಲ್ಲ ಉಪಸ್ಥಿತರಿದ್ದರು. ನಾಸೀರ ಚಿಕ್ಕನಕೊಪ್ಪ ಕಾರ್ಯಕ್ರಮ ನಿರೂಪಿಸಿದರು.

ಶ್ರೀ ಜ. ರೇಣುಕಾಚಾರ್ಯ ಜಯಂತಿ ಯುಗಮಾನೋತ್ಸವ ಸಮಾರಂಭದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು

# ಆಧ್ಯಾತ್ಮಕ್ಕೆ ಆತ್ಮ ಸಂಯಮವೇ ಅಡಿಪಾಯ

■ ವಿಜಯಸಾಕ್ಷಿ ಸುದ್ದಿ, ಬಾಳೆಹೊನ್ನೂರು

ಮಾನವನ ಬದುಕು ಒತ್ತಡಗಳಿಂದ ಬಳಲಿಹೋಗಿದೆ. ಯಂತ್ರದಂತೆ ದುಡಿದರೂ, ಸಂಪತ್ತು ಗಳಿಸಿದರೂ ಶಾಂತಿ ಕಾಣುತ್ತಿಲ್ಲ. ಬಾಳಿನ ವಿಕಾಸಕ್ಕೆ ಆಧ್ಯಾತ್ಮದ ಅರಿವು ಬೇಕು. ಆತ್ಮ ಸಂಯಮ ಆಧ್ಯಾತ್ಮ ಜೀವನದ ಅಡಿಪಾಯವಾಗಿದೆ ಎಂದು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಸೋಮವಾರ ಶ್ರೀ ಜಗದ್ಗುರು ರಂಭಾಪುರಿ ಪೀಠದಲ್ಲಿ ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತಿ ಯುಗಮಾನೋತ್ಸವ ಹಾಗೂ ಕ್ಷೇತ್ರನಾಥ ಶ್ರೀ ವೀರಭದ್ರಸ್ವಾಮಿ ಮಹಾರಥೋತ್ಸವದ ಅಂಗವಾಗಿ ಜರುಗಿದ ವೀರಗಾಸೆ-ಪುರವಂತರ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ವಿಜ್ಞಾನ-ತಂತ್ರಜ್ಞಾನದಿಂದ ಮನುಷ್ಯನ ಪ್ರಗತಿ ಅದ್ಭುತವಾಗಿದೆ. ಭೌತಿಕ ಸಿರಿ ಸಂಪತ್ತು, ಅಧಿಕಾರ ನೆಮ್ಮದಿ ತರಲಾರದು. ಸತ್ಯ ಧರ್ಮದ ವಿಷಯದಲ್ಲಿ ಒಂದಿಷ್ಟಾದರೂ ಆಧ್ಯಾತ್ಮ ಜ್ಞಾನದ ಅರಿವು ಇರಬೇಕಾದುದು ಅವಶ್ಯಕ. ಇಂದಿನ ವಿಜ್ಞಾನ ಯುಗದಲ್ಲಿಯೂ ಸಹ ಶ್ರೀ ವೀರಭದ್ರಸ್ವಾಮಿಯ ಲೀಲೆ-ಪವಾಡಗಳು



ಅದ್ಭುತವಾಗಿವೆ. ದುಷ್ಟ ಶ'ಕ್ತಿ'ಗ'ಳ' ನಿರ್ಮೂಲನೆಗೆ ಮತ್ತು ಶಿವಶಕ್ತಿ ಸಂವರ್ಧನೆ ಶ್ರೀ ವೀರಭದ್ರಸ್ವಾಮಿಯ ಅವತಾರವಾಗಿದೆ. ಜಗದ ಕತ್ತಲೆ ಕಳೆದು ಜ್ಞಾನದ ಬೆಳಗು ಬೀರಲು ಗುರು ಬಹಳಷ್ಟು ಮುಖ್ಯ. ವೀರಶೈವ ಸಂಸ್ಕೃತಿಯ ಬೆಳವಣಿಗೆಗೆ ವೀರಗಾಸೆ ಮತ್ತು ಪುರವಂತರ ಕೊಡುಗೆ ಅಪೂರ್ವವಾದುದು. ಪ್ರಾಚೀನ ಸಂಸ್ಕೃತಿಯ ಅರಿವು ಮೂಡಿಸುವುದೇ ಈ ಸಮಾರಂಭದ ಮೂಲ ಉದ್ದೇಶವೆಂದರು.

ವಾಣಿಜ್ಯ ತೆರಿಗೆ ಅಧಿಕಾರಿ ಭುವನೇಶ್ವರಿ ಪಾಟೀಲ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಮಾತನಾಡಿದರು. 'ರಂಭಾಪುರಿ ಬೆಳಗು' ಮಾಸ ಪತ್ರಿಕೆಯನ್ನು ಬೆಂಗಳೂರು ಶ್ರೀ ಜಗದ್ಗುರು ರೇಣುಕಾಚಾರ್ಯ ವಿದ್ಯಾಸಂಸ್ಥೆಯ ಅಧ್ಯಕ್ಷ ಯು. ಎಂ. ಬಸವರಾಜ್ ಬಿಡುಗಡೆಗೊಳಿಸಿ, ಧರ್ಮ ಧ್ವಜಾರೋಹಣ ನೆರವೇರಿಸಿದ ಚಿಕ್ಕಮಗಳೂರು ಶಾಸಕ ಹೆಚ್.ಡಿ. ತಮ್ಮಯ್ಯ ಮಾತನಾಡಿದರು.

ಸುಳ್ಳ ಪಂಚಗೃಹ ಹಿರೇಮಠದ ಶಿವಸಿದ್ಧರಾಮೇಶ್ವರ ಶಿವಾಚಾರ್ಯ ಸ್ವಾಮಿಗಳು ನೇತೃತ್ವ ವಹಿಸಿದ ಸಮಾರಂಭದಲ್ಲಿ ಕವಲೇದುರ್ಗ ಭುವನಗಿರಿ ಸಂಸ್ಥಾನ ಮಠದ ಮರುಳಸಿದ್ಧ ಶಿವಾಚಾರ್ಯ ಸ್ವಾಮಿಗಳು ಪ್ರಾಸ್ತಾವಿಕ ನುಡಿ ನಮನ ಸಲ್ಲಿಸಿದರು. ಮಳಲಿ ಸಂಸ್ಥಾನ ಮಠದ ಡಾ. ನಾಗಭೂಷಣ ಶ್ರೀಗಳು, ಕಡೇನಂದಿಹಳ್ಳಿ ರೇವಣಸಿದ್ದೇಶ್ವರ ಶ್ರೀಗಳು, ಕಾರ್ಜುವಳ್ಳಿ ಸದಾಶಿವ ಶ್ರೀಗಳು ಶ್ರೀ ರಂಭಾಪುರಿ ಜಗದ್ಗುರುಗಳು ಗುರುರಕ್ಷೆ ನೀಡಿ ಆಶೀರ್ವದಿಸಿದರು. ತೆಂಡೆಕೆರೆ, ಧನಗೂರು, ಸಂಗೊಳ್ಳಿ, ಬೇರುಗಂಡಿ, ದೋರನಹಳ್ಳಿ, ಅಚಲೇರಿ, ದೊಡ್ಡಸಗರ, ಸಿದ್ಧರಬೆಟ್ಟ, ನಂದಿತಾವರೆ ಶ್ರೀಗಳು ಉಪಸ್ಥಿತರಿದ್ದರು.

ಕುಮಾರಿ ನೇಹಾ-ಲಿಖಿತಾ ಮತ್ತು ಧನ್ಯ ಇವರಿಂದ ಭರತನಾಟ್ಯ ಜರುಗಿ-ತು. ಶ್ರೀ ಜಗದ್ಗುರು ರೇಣುಕಾಚಾರ್ಯ ಗುರುಕುಲದ ಸಾಧಕರಿಂದ ವೇದಘೋಷ, ಚಿಕ್ಕಮಗಳೂರಿನ ಶ್ರೀ ಜಗದ್ಗುರು ರೇಣುಕಾಚಾರ್ಯ ಮಹಿಳಾ ಮಂಡಳದ ಸದಸ್ಯರಿಂದ ಪ್ರಾರ್ಥನಾಗೀತೆ ಜರುಗಿ-ತು. ಚಿಕ್ಕಮಗಳೂರು ತಾಲೂಕಾ ವೀರಶೈವ ಸಮಾಜದ ಅಧ್ಯಕ್ಷ ಬಿ.ಎ. ಶಿವಶಂಕರ ಸ್ವಾಗತಿಸಿದರು. ಮುಖ್ಯೋಪಾಧ್ಯಾಯ ವೀರೇಶ ಕುಲಕರ್ಣಿ ನಿರೂಪಿಸಿದರು.

ಸಮಾರಂಭವನ್ನು ಉದ್ಘಾಟಿಸಿದ ಎಡೆಯೂರು ಕ್ಷೇತ್ರದ ರೇಣುಕ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ಶಿವ ಧರ್ಮದ ತಂಗಾಳಿ ಜೀವನ ಉನ್ನತಿಗೆ ಸಹಕಾರಿ. ನಿರ್ಭಯದಿಂದ ಬಾಳುವುದೇ ನಿಜವಾದ ಬದುಕು. ಬದುಕು ಕಲಿಸುವ ಪಾಠಗಳು ವಿಚಿತ್ರ. ಸಹನೆ-ತಾಳ್ಮೆ ಜೊತೆಗಿಲ್ಲದಿದ್ದರೆ ಉನ್ನತಿ ಸಾಧ್ಯವಿಲ್ಲ. ವೀರಶೈವ ಧರ್ಮದಲ್ಲಿ ವೀರಗಾಸೆ ಮತ್ತು ಪುರವಂತರಿಗೆ ವಿಶೇಷ ಗೌರವವಿದೆ. ವೀರಭದ್ರನ ಪರಾಕ್ರಮ ಧರ್ಮ ಸಂರಕ್ಷಣೆಗೆ ಮೂಲವಾಗಿದೆ ಎಂದರು.

## ಎಸ್ಎಸ್ಎಲ್‌ಸಿ ಪರೀಕ್ಷೆಯನ್ನು ನಿರಾತಂಕವಾಗಿ ಎದುರಿಸಿ

■ ವಿಜಯಸಾಕ್ಷಿ ಸುದ್ದಿ, ಗದಗ



ಎಸ್‌ಎಸ್‌ಎಲ್‌ಸಿ ಪರೀಕ್ಷೆ ಸಮೀಪಿಸುತ್ತಿದೆ. ಯುದ್ಧಕಾಲದಲ್ಲಿ ಶಸ್ತ್ರಾಭ್ಯಾಸ ಮಾಡುವಂತೆ ಕೊನೆಯ ಘಳಿಗೆಯಲ್ಲಿ ನಿದ್ರೆಗೆಟ್ಟು ಓದುವ ಬದಲಾಗಿ ಏನು ಮಾಡಬೇಕು ಎಂದು ನಿವೃತ್ತ ಹಿರಿಯ ಉಪನ್ಯಾಸಕ ಡಾ. ಅಮರೇಶ ಕೆ.ನಾಶಿ ಅವರು ಸಲಹೆ ನೀಡಿದ್ದಾರೆ. ಈ ಕುರಿತು ಮಾಹಿತಿ ನೀಡಿರುವ ಅವರು, ಎಸ್‌ಎಸ್‌ಎಲ್‌ಸಿ ಪರೀಕ್ಷೆಯು ವಿದ್ಯಾರ್ಥಿ ಜೀವನದಲ್ಲಿ ಪ್ರಮುಖ ಘಟ್ಟವಾಗಿದೆ. 1ನೇ ತರಗತಿಯಿಂದ 9ನೇ ತರಗತಿವರೆಗೆ ನಿಮಗೆ ಆಸಕ್ತಿ ಇರಲಿ, ಇಲ್ಲದಿರಲಿ ಅನಿವಾರ್ಯವಾಗಿ ಓದಬೇಕಾಗಿರುತ್ತದೆ. ಆದರೆ ಎಸ್‌ಎಸ್‌ಎಲ್‌ಸಿ ನಿಮ್ಮ ಗುರಿಯನ್ನು ನಿರ್ಣಯಿಸುವ ಹಂತ. ಇದು ನಿಮ್ಮ ವೃತ್ತಿ ಬದುಕಿನ ಬುನಾದಿಯಾಗಿದ್ದು, ಮುಂದೆ ಯಾವ ವೃತ್ತಿಪರ ಕೋರ್ಸ್‌ಗಳನ್ನು ನೀವು ಆಯ್ಕೆ ಮಾಡಿಕೊಳ್ಳಬೇಕೆಂಬುದಕ್ಕೆ ಇದು ಪರ್ವಕಾಲ. ಹಾಗಾಗಿ ಪೋಷಕರು, ಶಿಕ್ಷಕರು, ನೆರೆಹೊರೆಯವರು ನಿಮ್ಮ ಬಗ್ಗೆ ನಿಮಗಿಂತ ಆಸಕ್ತಿ ಹಾಗೂ ನಿರೀಕ್ಷೆಗಳನ್ನು ಇಟ್ಟುಕೊಂಡಿರುತ್ತಾರೆ. ಆದ್ದರಿಂದ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ನೀವು ಪಡೆಯುವ ಅಂಕಗಳು ಪ್ರಮುಖ ಪಾತ್ರವನ್ನು ವಹಿಸುತ್ತವೆ ಎಂದಿದ್ದಾರೆ. ಹಾಗೆಂದು, ಪರೀಕ್ಷೆ ಸನ್ನಿಹಿತವಾಗುತ್ತಿರುವ ಕಾಲದಲ್ಲಿ ಹೆಚ್ಚು ನಿದ್ರೆಗೆಟ್ಟು ಓದುವುದು ತರವಲ್ಲ. ನಿಮ್ಮ ಪೂರ್ವಸಿದ್ಧತಾ ಪರೀಕ್ಷೆಯ ಫಲಿತಾಂಶ ನಿಮ್ಮ ತಯಾರಿಯನ್ನು ಸಾಬೀತುಪಡಿಸುತ್ತದೆ. ವಿಷಯವಾರು ಪತ್ರಿಕೆಯಲ್ಲಿ ನೀವು ಉತ್ತರಿಸುವಾಗ ಮಾಡಿದ ತಪ್ಪುಗಳಿಗೆ ನಿಮ್ಮ ಶಿಕ್ಷಕರು ನೀಡಿರುವ ಹಿಮ್ಮಾಹಿತಿಯು ನೀವು ಅಂತರ್ ಅವಲೋಕನ ಮಾಡಿಕೊಳ್ಳಲು ಸಾಧ್ಯವಾಗುವುದರೊಂದಿಗೆ ಮುಖ್ಯ ಪರೀಕ್ಷೆಗೆ ನಿಮ್ಮ ತಯಾರಿ ಹೇಗಿರಬೇಕೆಂಬುದಕ್ಕೆ ಕನ್ನಡಿಯಾಗುತ್ತದೆ. ಪರೀಕ್ಷೆಯ ಹಿಂದಿನ ದಿನವೇ ಎಲ್ಲಾ ತಯಾರಿ ನಿಮ್ಮದಾಗಿರಲಿ. ಪೋಷಕರ ಕಾಳಜಿ ಬಗ್ಗೆ ಬೇಸರಿಸದಿರಿ. ನಗುತ್ತಲೇ ಪೂರ್ವಸಿದ್ಧತೆ ಮಾಡಿಕೊಳ್ಳಿ. ಪ್ರವೇಶಪತ್ರ ಹಾಗೂ ಪರೀಕ್ಷೆಗೆ ಬೇಕಾಗುವ ಎಲ್ಲಾ ಲೇಖನ ಸಾಮಗ್ರಿಗಳನ್ನು ಜೋಡಿಸಿಟ್ಟುಕೊಂಡಲ್ಲಿ ಮರುದಿನ ಪರೀಕ್ಷೆಗೆ ನಿರಾತಂಕವಾಗಿ ಹೋಗಿ ಬರಲು ಸಾಧ್ಯವಾಗುತ್ತದೆ ಎಂದು ವಿದ್ಯಾರ್ಥಿಗಳಿಗೆ ಆತ್ಮವಿಶ್ವಾಸದ ನುಡಿಗಳನ್ನಾಡಿದ್ದಾರೆ.

### ಎಸ್.ಎಸ್.ಎಲ್.ಸಿ ಪರೀಕ್ಷಾ ಫಲಿತಾಂಶ ಸುಧಾರಣೆ ಕುರಿತ ಸಭೆಯಲ್ಲಿ ಜಿಲ್ಲಾಧಿಕಾರಿ ದಿವ್ಯ ಪ್ರಭು

# ಶೈಕ್ಷಣಿಕ ವಾತಾವರಣದಲ್ಲಿ ಗುಣಮಟ್ಟದ ಬದಲಾವಣೆ

■ ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ಮಿಶನ್ ವಿದ್ಯಾಕಾಶಿ ಯೋಜನೆಯಡಿ ಹಲವಾರು ಕಾರ್ಯಕ್ರಮಗಳ ಮೂಲಕ 10ನೇ ವರ್ಗದ ವಿದ್ಯಾರ್ಥಿಗಳಲ್ಲಿ ಪರೀಕ್ಷಾ ಭಯ ತೆಗೆದು ಹಾಕುವಲ್ಲಿ ಯಶಸ್ವಿಯಾಗಿದೆ. ಶಿಕ್ಷಣ ಇಲಾಖೆ ಅಧಿಕಾರಿಗಳ, ಪಾಲಕರ, ಶಿಕ್ಷಕರ ಪ್ರಯತ್ನದಿಂದಾಗಿ ಜಿಲ್ಲೆಯ ಶೈಕ್ಷಣಿಕ ಗುಣಮಟ್ಟದಲ್ಲಿ ಸಾಕಷ್ಟು ಬದಲಾವಣೆ ಕಾಣುತ್ತಿದೆ. ವಿದ್ಯಾರ್ಥಿಗಳು ಆಸಕ್ತಿಯಿಂದ ಓದುತ್ತಿದ್ದಾರೆ. ಇದು ನಮಗೆಲ್ಲ ಹೆಮ್ಮೆ ಮೂಡಿಸಿದೆ ಎಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ಹೇಳಿದರು.

ಅವರು ಮಂಗಳವಾರ ಮಧ್ಯಾಹ್ನ ಕುಂದಗೋಳ ಪಟ್ಟಣದ ಸನ್‌ಶೈನ್ ಪ್ರೌಢಶಾಲೆಯ ಆವರಣದಲ್ಲಿ ಜಿಲ್ಲಾಡಳಿತ, ಶಾಲಾ ಶಿಕ್ಷಣ ಇಲಾಖೆ ಸಂಯುಕ್ತವಾಗಿ ಮಿಶನ್ ವಿದ್ಯಾಕಾಶಿ ಯೋಜನೆಯಡಿ, ಎಸ್.ಎಸ್.ಎಲ್.ಸಿ ಪರೀಕ್ಷಾ ಫಲಿತಾಂಶ ಸುಧಾರಣೆ ಮತ್ತು ಶೈಕ್ಷಣಿಕ ಗುಣಮಟ್ಟ ಸುಧಾರಣೆ ಕುರಿತು ವಿವಿಧ ಪ್ರೌಢಶಾಲೆಗಳ ಮುಖ್ಯೋಪಾಧ್ಯಾಯರ, ಎಸ್.ಡಿ.ಎಂ.ಸಿ. ಅಧ್ಯಕ್ಷರ, ಪಾಲಕರ ಸಭೆ ಮತ್ತು 10ನೇ ತರಗತಿ ವಿದ್ಯಾರ್ಥಿಗಳೊಂದಿಗೆ ಸಂವಾದ ಕಾರ್ಯಕ್ರಮ ಜರುಗಿಸಿ ಮಾತನಾಡಿದರು.

ಮಕ್ಕಳಲ್ಲಿ ಓದುವ ಅಭಿರುಚಿ ಮೂಡಿಸಬೇಕು. ಅವರಲ್ಲಿನ ಉತ್ತಮ ಆಸಕ್ತಿಗಳನ್ನು ಪ್ರೋತ್ಸಾಹಿಸಬೇಕು. ಪಾಲಕರಿಗೆ ಮಕ್ಕಳಲ್ಲಿ ಉತ್ತಮ ಸಂಸ್ಕಾರ, ಅಭಿರುಚಿ ಬೆಳೆಸುವ ಜವಾಬ್ದಾರಿ ಇದೆ. ಮಕ್ಕಳ ಯಶಸ್ಸು ನಮ್ಮೆಲ್ಲರ ಪ್ರಯತ್ನದಲ್ಲಿದೆ. ಜಿಲ್ಲೆಯ ಎಲ್ಲ ಮಕ್ಕಳು ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಉತ್ತೀರ್ಣರಾಗಬೇಕು ಮತ್ತು ಪ್ರತಿಭಾವಂತ ವಿದ್ಯಾರ್ಥಿಗಳು ರಾಜ್ಯಕ್ಕೆ ರ್‍ಯಾಂಕ್ ಬರಬೇಕು. ಈ ನಿಟ್ಟಿನಲ್ಲಿ ಮಿಶನ್ ವಿದ್ಯಾಕಾಶಿ ಕಳೆದ ಹತ್ತು ತಿಂಗಳಿಂದ ನಿರಂತರ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳುವ ಮೂಲಕ ಭರವಸೆ ಕಂಡಿದೆ ಎಂದರು.



ಸಭೆಯಲ್ಲಿ ಶಾಲಾ ಫಲಿತಾಂಶ ಸುಧಾರಣೆ ಮತ್ತು ಮಕ್ಕಳ ದಾಖಲಾತಿ ಪ್ರಗತಿ ಕುರಿತು ಯರಗುಪ್ಪಿ ಸರಕಾರಿ ಪ್ರೌಢಶಾಲೆ ಮುಖ್ಯೋಪಾಧ್ಯಾಯ ಎಫ್.ವಿ. ಮಂಜಣ್ಣವರ, ಸಂಶಿ ಸರಕಾರಿ ಪ್ರೌಢಶಾಲೆಯ ಎಸ್.ಡಿ.ಎಂ.ಸಿ. ಅಧ್ಯಕ್ಷ ಜಿ.ಎಚ್. ಪಾಳೇದ, ಮಳಲಿ ಸರಕಾರಿ ಪ್ರೌಢಶಾಲೆ ಎಸ್.ಡಿ.ಎಂ.ಸಿ ಅಧ್ಯಕ್ಷ ನೆಹರು ಪಾಟೀಲ, ಕಮಡೊಳ್ಳಿ ಪ್ರೌಢಶಾಲೆ ಪಾಲಕರ ಸಮಿತಿಯ ಮಲ್ಲಿಕಾರ್ಜುನ ಪಾಟೀಲ, ಶಿಕ್ಷಕಿ ಎಫ್.ಸಿ. ದಂಡಿನ, ಸ್ವಾಮಿ ವಿವೇಕಾನಂದ ಆಂಗ್ಲ ಮಾಧ್ಯಮ ಪ್ರೌಢಶಾಲೆ ವಿದ್ಯಾರ್ಥಿನಿ ಸ್ನೇಹಾ ಮೇಟಿ, ಜರೀನಾ ದರೂಬಾಯಿ, ಶ್ರೀ ಸದ್ಗುರು ಶಿವಾನಂದ ಬಾಲಿಕಾ ಪ್ರೌಢಶಾಲೆಯ ಪ್ರತಿಭಾ ಕುಸುಗಲ್ಲ, ಗುರುದೇವ ಶ್ರೀ ಮಲ್ಲಿಕಾರ್ಜುನ ಪ್ರೌಢಶಾಲೆಯ ಆದಿತ್ಯಾ, ಸನ್‌ಶೈನ್ ಪ್ರೌಢಶಾಲೆಯ ಆರತಿ ಕಂಪ್ಲಿಕೊಪ್ಪ, ಸಂಶಿ ಸರಕಾರಿ ಪ್ರೌಢಶಾಲೆಯ ಅಂಜಲಿ ಕೊಬ್ಬಯ್ಯನವರ, ಆರ್.ಎಂ.ಎಸ್.ಎ ಪ್ರೌಢಶಾಲೆಯ ಅಪೂರ್ವಾ ಚಂದ್ರಶೇಖರ ದಿವಟಗಿ ಮಾತನಾಡಿ, ತಮ್ಮ ಅಭಿಪ್ರಾಯಗಳನ್ನು ಹಂಚಿಕೊಂಡು, ಜಿಲ್ಲಾಧಿಕಾರಿಗಳೊಂದಿಗೆ ಸಂವಾದ ನಡೆಸಿದರು.

ಕ್ಷೇತ್ರ ಶಿಕ್ಷಣಾಧಿಕಾರಿ ಮಹಾದೇವಿ ಮಾಡಲಗೇರಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಶಿಕ್ಷಣ ಸಂಯೋಜಕ ಭೀಮಣ್ಣ ಸಾವಳಗಿ ಕಾರ್ಯಕ್ರಮ ನಿರೂಪಿಸಿದರು. ಸನ್‌ಶೈನ್ ಆಂಗ್ಲ ಮಾಧ್ಯಮ ಪ್ರೌಢಶಾಲೆಯ ಮುಖ್ಯೋಪಾಧ್ಯಾಯೆ ಎಸ್.ಎಂ. ಬಡಿಗೇರ ವಂದಿಸಿದರು.

ಕಳೆದ ಒಂದು ತಿಂಗಳಿಂದ ಜಿಲ್ಲೆಯ ಎಲ್ಲ ತಾಲೂಕುಗಳಿಗೆ ಭೇಟಿ ನೀಡಿ, ಅಲ್ಲಿನ ಸಾವಿರಾರು ವಿದ್ಯಾರ್ಥಿಗಳೊಂದಿಗೆ ಮಿಶನ್ ವಿದ್ಯಾಕಾಶಿ ಯೋಜನೆಯಡಿ ಶೈಕ್ಷಣಿಕ ಗುಣಮಟ್ಟ ಸುಧಾರಣೆ ಹಾಗೂ ವಿದ್ಯಾರ್ಥಿಗಳಲ್ಲಿನ ಓದುವ-ಬರೆಯುವಲ್ಲಿ ಆಗಿರುವ ಬದಲಾವಣೆ ಕುರಿತು ವಿದ್ಯಾರ್ಥಿಗಳೊಂದಿಗೆ ಸಂವಾದ ಮಾಡಲಾಗಿದೆ. ವಿದ್ಯಾರ್ಥಿಗಳಲ್ಲಿ, ಶಿಕ್ಷಕರಲ್ಲಿ ಆಗಿರುವ ಶೈಕ್ಷಣಿಕ ಬದಲಾವಣೆ, ಸಾಧಿಸುವ ಛಲ ನೋಡಿ ನಮ್ಮ ಕಾರ್ಯದಲ್ಲಿನ ವಿಶ್ವಾಸ ಹೆಚ್ಚಿದೆ. ವಿದ್ಯಾರ್ಥಿಗಳ ಮಾತು, ಅವರ ಆತ್ಮವಿಶ್ವಾಸ ಕೇಳಿ ಸಂತಸವಾಗಿದೆ ಎಂದು ಡಿಸಿ ದಿವ್ಯ ಪ್ರಭು ತಿಳಿಸಿದರು.

# ಸೂಕ್ತ ಸಮಯಕ್ಕೆ ಕರ ಪಾವತಿಸಿ




■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ಮುಳಗುಂದ ಪಟ್ಟಣದ ಅಭಿವೃದ್ಧಿಗೆ ಸಾರ್ವಜನಿಕರ ಸಹಕಾರ ಅತ್ಯಗತ್ಯವಾಗಿದೆ ಎಂದು ಪ.ಪಂ ಮುಖ್ಯಾಧಿಕಾರಿ ಮಂಜುನಾಥ ಗುಳೇದ ಹೇಳಿದರು.

ಅವರು ಪ.ಪಂ ಸಭಾಭವನದಲ್ಲಿ 2025/26ನೇ ಸಾಲಿನ ಅಂದಾಜು ಆಯವ್ಯಯ ಮಂಡಿಸಿ ಮಾತನಾಡಿ, ಪಟ್ಟಣದ ಸಾರ್ವಜನಿಕರ ಸಹಾಯ-ಸಹಕಾರದಿಂದ ಇಂದು ಅಭಿವೃದ್ಧಿಯ ಫಥದಲ್ಲಿ ಸಾಗುತ್ತಿದ್ದು, ಸಾರ್ವಜನಿಕರು ಎಲ್ಲೆಂದರಲ್ಲಿ ಕಸವನ್ನು ಹಾಕದೇ ಪ.ಪಂ ಕಸ ವಿಲೇವಾರಿ ವಾಹನಗಳಿಗೆ ಹಾಕುವುದರಿಂದ ಪಟ್ಟಣವನ್ನು ಸುಂದರವಾಗಿಟ್ಟುಕೊಳ್ಳಲು, ಸಾರ್ವಜನಿಕರ ಆರೋಗ್ಯ ಕಾಪಾಡಲು ಸಹಕಾರಿಯಾಗುತ್ತದೆ. ಪಟ್ಟಣದ ಅಭಿವೃದ್ಧಿಗಾಗಿ ಸಮಯಕ್ಕೆ ಸರಿಯಾಗಿ ನೀರಿನ ಕರ ಹಾಗೂ ಆಸ್ತಿ ಕರಗಳನ್ನು ಕಟ್ಟಿ ಅಭಿವೃದ್ಧಿಗೆ ಸಹಕರಿಸಬೇಕು ಎಂದರು.

ಪ.ಪಂ ಅಧ್ಯಕ್ಷೆ ಯಲ್ಲವ್ವ ಕವಲೂರ, ಉಪಾಧ್ಯಕ್ಷೆ ಅನಸೂಯಾ ಸೋಮಗೇರಿ, ಸ್ಥಾಯಿ ಸಮಿತಿ ಅಧ್ಯಕ್ಷ ಎಂ.ಎಂ. ಶೇಖ, ಪ.ಪಂ ಸದಸ್ಯರಾದ ಕೆ.ಎಲ್. ಕರಿಗೌಡರ, ಎಸ್.ಸಿ. ಬಡ್ನಿ, ಬಸವರಾಜ ಹಾರೋಗೇರಿ, ನಾಗರಾಜ ದೇಶಪಾಂಡೆ, ಮಾಹಾದೇವಪ್ಪಾ ಗಡಾದ, ವಿಜಯ ನೀಲಗುಂದ, ದ್ಯಾಮಣ್ಣಾ ನೀಲಗುಂದ, ಖ್ರಿಷಿದಾ ಕಲ್ಲಾನವರ, ಚಂಪಾವತಿ ಗುಳೇದ, ಅನಿಮ್ಮಾ ಅಸುಂಡಿ, ಪಾರವ್ವ ಅಳ್ಳಣ್ಣವರ, ಉಮಾ ಮಟ್ಟಿ, ದಾವುದ ಜಮಾಲ, ಮರಿಯಪ್ಪ ನಡಗೇರಿ, ಹಾಗೂ ಪ.ಪಂ ಸಿಬ್ಬಂದಿಗಳು, ಪೌರಕಾರ್ಮಿಕರು ಇದ್ದರು.

# ಮಹಿಳೆಯರು ಸಚ್ಚಾರಿತ್ರ್ಯವಂತರಾಗಿ

■ ವಿಜಯಸಾಕ್ಷಿ ಸುದ್ದಿ, ಹುಲಕೋಟಿ

ಮಹಿಳೆಯರು ಸಚ್ಚಾರಿತ್ರ್ಯವನ್ನು ರೂಢಿಸಿಕೊಳ್ಳಬೇಕು. ಅಂದಾಗ ಮನೆ, ಊರು, ನಾಡು ಸಚ್ಚಾರಿತ್ರ್ಯದಿಂದ ಕೂಡಿರುತ್ತದೆ ಎಚಿದು ಸುಮಿತ್ರಾ ಡಿ.ಪಾಟೀಲ ನುಡಿದರು.

ಹುಲಕೋಟಿಯ ಪ್ರಜಾಪಿತ ಬ್ರಹ್ಮಕುಮಾರಿ ಈಶ್ವರೀಯ ವಿಶ್ವವಿದ್ಯಾಲಯದಲ್ಲಿ ನಡೆದ ಮಹಿಳಾ ದಿನಾಚರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಬ್ರಹ್ಮಕುಮಾರಿ ಉಮಾ ಅಕ್ಕನವರು ದಿವ್ಯ ಸಾನ್ನಿಧ್ಯ ವಹಿಸಿ ಮಾತನಾಡಿ, ಮಹಿಳೆಯು ಶೃಂಗಾರದ ಗೊಂಬೆಯಾಗದೆ ಹೃದಯವಂತ ಸುಶೀಲೆಯರಾಗಬೇಕು.



ಜೀವನ ಮೌಲ್ಯಗಳ ಜ್ಞಾನವನ್ನು ಪಡೆದುಕೊಂಡು ಸ್ವರಕ್ಷಣೆಯನ್ನು ನಿರ್ಮಾಣ ಮಾಡಿಕೊಳ್ಳಬೇಕು ಎಂದರು.

ಪದವಿ ಕಾಲೇಜಿನ ಇಂಗ್ಲೀಷ್ ಉಪನ್ಯಾಸಕರಾದ ಸಾವಿತ್ರಿ ಟಿ ಮಾತನಾಡಿ, ಮಹಿಳೆಯರು ಆಧುನಿಕತೆಯ ಅಬ್ಬರದಲ್ಲಿ ನೈತಿಕತೆಯನ್ನು ಮರೆಯಬಾರದು. ಮಹಿಳೆಯು ಮನಸ್ಸು ಮಾಡಿದರೆ ನವ್ಯ ನೂತನ ನೈತಿಕ ಭಾರತ ನಿರ್ಮಾಣ ಸಾಧ್ಯ ಎಂದರು.

ಉದ್ಯಮಿ ಶ್ವೇತಾ ಆನೆ ಅತಿಥಿಗಳಾಗಿ ಆಗಮಿಸಿದ್ದರು. ರೋಹಿಣಿ ಸ್ವ-ಸಹಾಯ ಸಂಘ, ಶಿವಶಕ್ತಿ ಸ್ವ-ಸಹಾಯ ಸಂಘ, ಶ್ರೀ ಮಂಜುನಾಥ ಸ್ವ-ಸಹಾಯ ಸಂಘದ ಮಹಿಳೆಯರು ಮತ್ತು ಹುಲಕೋಟಿ ಸೇರಿದಂತೆ ಸುತ್ತಲಿನ ಗ್ರಾಮದ ಮಹಿಳೆಯರು ಪಾಲ್ಗೊಂಡಿದ್ದರು.

ಲೀಲಾವತಿ ಕಾಲವಾಡ ಸ್ವಾಗತಿಸಿದರು. ಪೂರ್ಣಿಮಾ ಲೋಟಗೇರಿ ನಿರೂಪಿಸಿದರು. ಹನುಮಂತ ಮಡಿವಾಳರ ವಂದಿಸಿದರು.

# ಶ್ರೀ ಜ. ರೇಣುಕಾಚಾರ್ಯ ಜಯಂತಿ ಕಾರ್ಯಕ್ರಮ ಇಂದು

■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಮುಳಗುಂದ ನಾಕಾದ ಹತ್ತಿರವಿರುವ ಶ್ರೀ ಜಗದ್ಗುರು ರೇಣುಕಾಚಾರ್ಯ ಮಂದಿರದಲ್ಲಿ ಮಾ.12ರ ಸಾಯಂಕಾಲ 4 ಗಂಟೆಗೆ ಮಹಾ ರಥೋತ್ಸವ ಹಾಗೂ ಧರ್ಮಸಭಾ ಕಾರ್ಯಕ್ರಮಗಳು ಶ್ರೀ ಜಗದ್ಗುರು ಪಂಚಾಚಾರ್ಯ ಸೇವಾ ಸಂಘದ ಆಶ್ರಯದಲ್ಲಿ ನೆರವೇರಲಿದೆ.

ಬೆಳಿಗ್ಗೆ ಶ್ರೀ ಜಗದ್ಗುರು ರೇಣುಕಾಚಾರ್ಯ ದೇವರಿಗೆ ಮಹಾ ರುದ್ರಾಭಿಷೇಕ, ಸಾಯಂಕಾಲ 5ಕ್ಕೆ ಶ್ರೀ ಜಗದ್ಗುರು ರೇಣುಕಾಚಾರ್ಯರ ಮಹಾ ರಥೋತ್ಸವ ಹಾಗೂ ಪಾಲಿಕೆ, ಶ್ರೀ ಜಗದ್ಗುರು ರೇಣುಕಾಚಾರ್ಯರ ಭಾವಚಿತ್ರ ಮೆರವಣಿಗೆಯು ಜರುಗಲಿವೆ. ಈ ರಥೋತ್ಸವವು ಶ್ರೀ ರೇಣುಕಾಚಾರ್ಯ ಮಂದಿರದಿಂದ ಹೊರಟು ವಕ್ಕಲಗೇರಿಯ ಶ್ರೀ ರಾಚೋಟೇಶ್ವರ ದೇವಸ್ಥಾನದವರೆಗೆ ಸಾಗಿ ಪುನಃ ದೇವಸ್ಥಾನವನ್ನು ತಲುಪಲಿದೆ.

ಸಾಯಂಕಾಲ 6.30ಕ್ಕೆ ನಡೆಯುವ ಧರ್ಮಸಭಾ ಕಾರ್ಯಕ್ರಮದ ದಿವ್ಯ ಸಾನ್ನಿಧ್ಯವನ್ನು ಶ್ರೀ ಷ.ಬ್ರ ಅಭಿನವ ಪಂಚಾಕ್ಷರ ಶಿವಾಚಾರ್ಯ ಸ್ವಾಮಿಗಳು ಅಡ್ನೂರ-ಗದಗ ರಾಜೂರ ಹಾಗೂ ಶ್ರೀ ಷ.ಬ್ರ. ಫಕೀರೇಶ್ವರ ಶಿವಾಚಾರ್ಯ ಸ್ವಾಮಿಗಳು ಓಂಕಾರೇಶ್ವರಮಠ ಮಲ್ಲಸಮುದ್ರ ಇವರು ವಹಿಸಿಕೊಳ್ಳಲಿದ್ದಾರೆ. ನೇತೃತ್ವವನ್ನು ಶ್ರೀ ಚಂದ್ರಶೇಖರ ದೇವರು ರೇಣುಕ ಮಂದಿರ ಗದಗ ವಹಿಸಿಕೊಳ್ಳುವರು.

ಶ್ರೀ ಜ.ಪಂ.ಸೇ.ಸಂಘದ ಅಧ್ಯಕ್ಷ ಮಂಜುನಾಥ ಈಶ್ವರಪ್ಪ ಬೇಲೇರಿ ಸ್ವಾಗತಿಸುವರು. ಶ್ರೀ ವೇ.ಮೂ. ಶಿವಕುಮಾರ ಶಾಸ್ತ್ರೀಗಳು ಬೀರವಳ್ಳಿ ಉಪನ್ಯಾಸ ನೀಡಲಿದ್ದಾರೆ. ಮುಖ್ಯ ಅತಿಥಿಗಳಾಗಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಉಪನಿರ್ದೇಶಕ ವೀರಯ್ಯಸ್ವಾಮಿ ಬಿ.ಹಿರೇಮಠ, ಗದಗ ಜಿಲ್ಲಾ ವೀರಶೈವ ಲಿಂಗಾಯತ ಮಹಾಸಭಾದ ಅಧ್ಯಕ್ಷ ಶರಣಪ್ಪ ಎಸ್.ಗುಡಿಮನಿ ಪಾಲ್ಗೊಳ್ಳುವರು.

ವೀರಯ್ಯಸ್ವಾಮಿ ಹೊಸಮಠ, ಮಹೇಶ ಕುಂದ್ರಾಳಹಿರೇಮಠ, ಅಕ್ಷತಾ ಹಿರೇಮಠ, ನಿವೇದಿತಾ ಆರ್.ಹೊಸಮಠ ಸಂಗೀತ ಸೇವೆ ನೀಡಲಿದ್ದಾರೆ. ಶ್ರೀನಿತ್ಯಂ ಯೋಗ ಕೇಂದ್ರದ ಮಹಿಳೆಯರಿಂದ ದೀಪ ನೃತ್ಯ ನಡೆಯಲಿದೆ. ವ್ಹಿ.ಕೆ. ಗುರುಮಠ ಕರ್ಯಕ್ರಮ ನಿರೂಪಿಸುವರು. ಶ್ರೀ ಜಗದ್ಗುರು ಪಂಚಾಚಾರ್ಯ ಸೇವಾ ಸಂಘದ ಮುಖ್ಯ ಘಟಕ, ಮಹಿಳಾ ಘಟಕ ಮತ್ತು ಯುವ ಘಟಕಗಳ ಸರ್ವ ಪದಾಧಿಕಾರಿಗಳು, ಸರ್ವ ಸದಸ್ಯರು ಮತ್ತು ಶ್ರೀ ಜಗದ್ಗುರು ರೇಣುಕಾಚಾರ್ಯರ ಪರಮ ಭಕ್ತರು, ಪೀಠಾಭಿಮಾನಿಗಳು, ಕಾರ್ಯಕ್ರಮದಲ್ಲಿ ಭಾಗವಹಿಸಿ ಶ್ರೀ ಜಗದ್ಗುರು ರೇಣುಕಾಚಾರ್ಯರ ಕೃಪಾಶಿರ್ವಾದಕ್ಕೆ ಪಾತ್ರರಾಗುವಚಿತೆ ಪ್ರಕಟಣೆಯಲ್ಲಿ ಕೋರಿದೆ.

## ಬೆಂಗಳೂರಿನ ಹಲವೆಡೆ ಮಳೆಯ ಸಿಂಚನ: ಸಿಲಿಕಾನ್ ಸಿಟಿ ಮಂದಿ ಕೂಲ್, ಕೂಲ್!

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಮಂಗಳವಾರ ಬೆಂಗಳೂರಿನ ಹಲವೆಡೆ ಮಳೆಯ ಸಿಂಚನ ಆಗಿದ್ದು, ಬಿಸಿಲಿನ ಬೇಗೆಯಿಂದ ಬಳಲಿ ಬೆಂಡಾಗಿದ್ದ ಸಿಟಿ ಮಂದಿ ಕೂಲ್-ಕೂಲಾಗಿದ್ದಾರೆ.

ಬಿರು ಬಿಸಿಲಿನಿಂದ ಬೇಯುತ್ತಿದ್ದ ಬೆಂದಕಾಳೂರಿನ ಜನರಿಗೆ ಮಳೆಯು ತಂಪು-ತಂಪು, ಕೂಲ್ ಕೂಲ್ ಅನುಭವ ನೀಡಿದೆ. ನಗರದ ಮೆಜೆಸ್ಟಿಕ್, ಕೆ.ಆರ್ ಮಾರ್ಕೆಟ್, ಆನಂದ್ ರಾವ್ ಸರ್ಕಲ್, ಕೆ.ಜಿ ರೋಡ್, ಶಿವಾನಂದ ಸರ್ಕಲ್ ಸೇರಿದಂತೆ ಹಲವೆಡೆ ಸಾಧಾರಣ ಮಳೆಯಾಗಿದೆ. ಸಂಜೆ ಕೆಲಸ ಮುಗಿಸಿ ಮನೆಗೆ ಹೊರಟ್ಟಿದ್ದವರಿಗೆ ವರುಣ ದೇವ ಮಳೆಯ ಸ್ವಾಗತ ನೀಡಿದ್ದಾನೆ. ಆದ್ರೆ ಏಕಾಏಕಿ ಬಂದ ಮಳೆಯಿಂದ ವಾಹನ ಸವಾರರು ಪರದಾಡಿದ್ದಾರೆ.

### ವೀಸಾ ನಿಯಮ ಉಲ್ಲಂಘನೆ | 15 ಭಾರತೀಯರನ್ನು ಗಡೀಪಾರು ಮಾಡಿದ ಶ್ರೀಲಂಕಾ

■ ವಿಜಯಸಾಕ್ಷಿ ಸುದ್ದಿ, ಶ್ರೀಲಂಕಾ

ವೀಸಾ ಷರತ್ತುಗಳನ್ನು ಉಲ್ಲಂಘಿಸಿ ಶ್ರೀಲಂಕಾದಲ್ಲಿ ನೆಲೆಸಿದ್ದ 15 ಭಾರತೀಯ ಪ್ರಜೆಗಳನ್ನು ಗಡೀಪಾರು ಮಾಡಲಾಗಿದೆ ಎಂದು ನ್ಯೂಸ್‌ವೈರ್ ಸೋಮವಾರ ವರದಿ ಮಾಡಿದೆ. ಈ ಗುಂಪನ್ನು ಶನಿವಾರ ಚೆನ್ನೈಗೆ ಗಡೀಪಾರು ಮಾಡಲಾಗಿದ್ದು, ಜಾಫ್ನಾದಲ್ಲಿ ನಡೆದ ದಾಳಿಯ ಸಂದರ್ಭದಲ್ಲಿ ಅವರನ್ನು ಬಂಧಿಸಲಾಗಿದೆ ಎಂದು ಶ್ರೀಲಂಕಾದ ವಲಸೆ ಇಲಾಖೆ ಹೇಳಿಕೆ. ವೀಸಾ ನಿಯಮ ಉಲ್ಲಂಘನೆ

ವಲಸೆ ಮತ್ತು ವಲಸೆಯ ನಿಯಂತ್ರಕ ಜನರಲ್ ನಿಲುಷಾ ಬಾಲಸೂರ್ಯ ಅವರ ಆದೇಶದ ಮೇರೆಗೆ ಈ ದಾಳಿ ನಡೆಸಲಾಗಿದೆ ಎಂದು ವರದಿ ಉಲ್ಲೇಖಿಸಿದೆ. ಗಡಿಪಾರಿಗೆ ಒಳಗಾದ ಭಾರತೀಯರು ಪ್ರವಾಸಿ ವೀಸಾಗಳನ್ನು ಬಳಸಿಕೊಂಡು ಶ್ರೀಲಂಕಾಕ್ಕೆ ಆಗಮಿಸಿದ್ದರು ಎಂದು ಇಲಾಖೆ ತಿಳಿಸಿದೆ. ವೀಸಾ ನಿಯಮ ಉಲ್ಲಂಘನೆ ಗಡಿಪಾರಿಗೆ ಒಳಗಾದವರಲ್ಲಿ ಎಂಟು ಮಂದಿ ಜಾಫ್ನಾದ ಗರಗಸದ ಕಾರ್ಖಾನೆಯಲ್ಲಿ ಕಾರ್ವರ್‌ಗಳಾಗಿ ಕೆಲಸ ಮಾಡುತ್ತಿದ್ದರೆ, ಐದು ಮಂದಿ ರೆಸ್ಟೋರೆಂಟ್‌ಗಳಲ್ಲಿ ಕೆಲಸ ಮಾಡುತ್ತಿದ್ದರು. ಇಬ್ಬರು ಧಾರ್ಮಿಕ ಪ್ರಚಾರಕ್ಕೆ ಸಂಬಂಧಿಸಿದ ಚಟುವಟಿಕೆಗಳಲ್ಲಿ ತೊಡಗಿದ್ದರು ಎಂದು ಅಲ್ಲಿನ ಮಾಧ್ಯಮ ಸೋಮವಾರ ವರದಿ ಮಾಡಿದೆ.


ಕರ್ನಾಟಕ ಸರಕಾರ

**ಗ್ರಾಮ ಪಂಚಾಯತ ಕಾರ್ಯಾಲಯ ಬೀಡನಾಳ**

ತಾಲ್ಲೂಕ:ಮುಂಡರಗಿ ಇ-ಮೇಲ್: mun.bidanal.gdg@gmail.com ಜಿಲ್ಲೆ:ಗದಗ

ಸಂ.ಗ್ರಾ.ಪಂ.ಬೀ/ಮ.ಗಾಂ.ರಾ.ಗ್ರಾ.ಉ.ಖಾ.ಯೋಜನೆ/ದರಪಟ್ಟಿ/2024-25 ದಿನಾಂಕ: 10-03-2025

**ದರಪಟ್ಟಿ ಪ್ರಕಟಣೆ**

ಅಧ್ಯಕ್ಷರು/ಅಭಿವೃದ್ಧಿ ಅಧಿಕಾರಿಗಳು ಗ್ರಾಮ ಪಂಚಾಯತ ಬೀಡನಾಳ ಇವರು 2024-25 ನೇ ಸಾಲಿನ ಮಹಾತ್ಮಗಾಂಧೀ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ ಅಡಿಯಲ್ಲಿ ಈ ಕೆಳಕಂಡ ಕಾಮಗಾರಿಗಳಿಗೆ ಅವಶ್ಯಕವಿರುವ ಐಟಂವಾರು ಸಾಮಗ್ರಿ ಮೊತ್ತಕ್ಕೆ ಸಾಮಗ್ರಿಗಳನ್ನು ಪೂರೈಸಲು ನೋಂದಾಯಿತ ಅರ್ಹ ವೆಂಡರ್/ಏಜೆನ್ಸಿಗಳಿಂದ ದರಪಟ್ಟಿಗಳನ್ನು ಆಹ್ವಾನಿಸಲಾಗಿದೆ. ಸದರಿ ಕಾಮಗಾರಿಗಳಿಗೆ ದರಪಟ್ಟಿ ಸಲ್ಲಿಸುವವರು ಗ್ರಾಮ

| ಕ್ರ. ಸಂ | ಕಾಮಗಾರಿಗಳ ಹೆಸರು | ಟೆಂಡರ್ ಮೊತ್ತ |
|---|---|---|
| 1 | ಬೀಡನಾಳ ಗ್ರಾಮದ ಹನಮವ್ವ ಬಸಾಪೂರ ಮನೆಯಿಂದ ಬಸವೇಶ್ವರ ದೇವಸ್ಥಾನದವರೆಗೆ ಸಿ ಸಿ ರಸ್ತೆ ನಿರ್ಮಾಣ | 147300.00 |
| 2 | ಬೀಡನಾಳ ಗ್ರಾಮದ ದ್ಯಾಮವ್ವನಗುಡಿಯಿಂದ ಈರಣ್ಣ ಗುಡಿಕೊಟಿ ಮನೆಯವರೆಗೆ ಸಿ ಸಿ ರಸ್ತೆ ನಿರ್ಮಾಣ | 147400.00 |
| 3 | ಬೀಡನಾಳ ಗ್ರಾಮದ ಹನಮಪ್ಪ ಸ ಕರಕಣ್ಣವರ ಮನೆಯಿಂದ ಉಮೇಶ ಉಡಚಣ್ಣವರ ಮನೆಯವರೆಗೆ ಸಿ ಸಿ ರಸ್ತೆ ನಿರ್ಮಾಣ | 147400.00 |
| 4 | ಬೂದಿಹಾಳ ಗ್ರಾಮದ ನಾಗಪ್ಪ ಕುಕನೂರ ಮನೆಯಿಂದ ಉಮೇಶ ಕುಕನೂರ ಮನೆಯವರೆಗೆ ಸಿ ಸಿ ರಸ್ತೆ ನಿರ್ಮಾಣ | 147400.00 |
| 5 | ಬೀಡನಾಳ ತಾಂಡಾ ಗ್ರಾಮದ ಭೀಮಪ್ಪ ದೊಡ್ಡಮನಿ ಮನೆಯಿಂದ ತುಕ್ಕಪ್ಪ ಶಂಕ್ರಪ್ಪ ನಾಯಕ ಮನೆಯವರೆಗೆ ಸಿ ಸಿ ರಸ್ತೆ ನಿರ್ಮಾಣ | 147300.00 |
| 6 | ಬೀಡನಾಳ ತಾಂಡಾ ಗ್ರಾಮದ ಶೇಖಪ್ಪ ರಾಠೋಡ ಮನೆಯಿಂದ ಹನಮಪ್ಪ ಲಮಾಣಿ ಹೊಲದವರೆಗೆ ಸಿ ಸಿ ರಸ್ತೆ ನಿರ್ಮಾಣ | 147300.00 |
| 7 | ಬೀಡನಾಳ ಗ್ರಾಮದ ಸರಕಾರಿ ಶಾಲೆಯಿಂದ ಮುಖ್ಯರಸ್ತೆವರೆಗೆ ಸಿ ಸಿ ಗಟಾರ ನಿರ್ಮಾಣ | 134000.00 |
| 8 | ಬೂದಿಹಾಳ ಗ್ರಾಮದ ಬೆಣೆಹಳ್ಳಿ ಮುಖ್ಯರಸ್ತೆಯಿಂದ ಅಡಿವೆಪ್ಪ ಕುಕನೂರ ಹೊಲದವರೆಗೆ ಸಿ ಸಿ ಗಟಾರ ನಿರ್ಮಾಣ | 134000.00 |
| 9 | ಬೂದಿಹಾಳ ಗ್ರಾಮದ ವಿರಾಪೂರ ಮನೆಯಿಂದ ಬೆಣ್ಣೆಹಳ್ಳಿ ಮುಖ್ಯರಸ್ತೆವರೆಗೂ ಸಿ ಸಿ ಗಟಾರ ನಿರ್ಮಾಣ | 134000.00 |
| 10 | ಬೀಡನಾಳ ಗ್ರಾಮದ ಹನಮಂತ ಸ್ವಾಗಿಹಾಳ ಮನೆಯಿಂದ ಈರಪ್ಪ ಮುಂಡವಾಡ ಮನೆಯವರೆಗೆ ಸಿ ಸಿ ಗಟಾರ ನಿರ್ಮಾಣ | 134000.00 |
| 11 | ಬೀಡನಾಳ ಗ್ರಾಮದ ಪರಸಪ್ಪ ಕೊಂಬಳಿ ಮನೆಯಿಂದ ಮುಖ್ಯರಸ್ತೆವರೆಗೂ ಸಿ ಸಿ ಗಟಾರ ನಿರ್ಮಾಣ | 134000.00 |
| 12 | ಬೀಡನಾಳ ಗ್ರಾಮದ ಮಲ್ಲಪ್ಪ ವಡ್ಡಟ್ಟಿ ಮನೆಯಿಂದ ರಾಜಕಮಲ ಹೊಲದವರೆಗೆ ಸಿ ಸಿ ಗಟಾರ ನಿರ್ಮಾಣ | 134000.00 |
| 13 | ತಿಪ್ಪಾಪೂರ ಗ್ರಾಮದ ಆಂದ್ರದವರ ಹೊಲದ ಹತ್ತೀರ ಇರುವ ಹಳ್ಳಕ್ಕೆ ಸಿಡಿ ಹಾಗೂ ರಸ್ತೆ ನಿರ್ಮಾಣ | 119000.00 |
| 14 | ತಿಪ್ಪಾಪುರ ಗ್ರಾಮದ ಸ್ಮಶಾನದಲ್ಲಿ ಚಿತಗಾರ ನಿರ್ಮಾಣ | 350877.00 |

**ಷರಾ:** ಖಾಲಿ ಟೆಂಡರ್ ಗ್ರಾಮ ಪಂಚಾಯತಿಯಿಂದ ಪಡೆದು ಸಲ್ಲಿಸವುದು ಹಾಗೂ ಪ್ರತಿ ಕಾಮಗಾರಿಯ ಟೆಂಡರ್ ಪಾರಂ **ಬೆಲೆ 200.00 ರೂಪಾಯಿಗಳು** ನಿಗದಿಪಡಿಸಿದೆ ಅರ್ಹ ವೆಂಡರ್/ಏಜೆನ್ಸಿಗಳಿಂದ ಖಾಲಿ ದರಪಟ್ಟಿ ಫಾರಂಗಾಗಿ ಅರ್ಜಿ ಸ್ವೀಕರಿಸುವ **ದಿನಾಂಕ: 11/03/2025 ರಿಂದ 19/03/2025 ರವರೆಗೆ** ಭರ್ತಿ ಮಾಡಿದ ದರಪಟ್ಟಿಗಳನ್ನು ಸ್ವೀಕರಿಸುವ **ದಿನಾಂಕ: 20/03/2025** ಮುಂಜಾನೆ **10:00** ಗಂಟೆಯಿಂದ ಮಧ್ಯಾಹ್ನ **2:30** ಗಂಟೆವರೆಗೆ. ಟೆಂಡರ್ ತೆರೆಯುವ ದಿನಾಂಕ ಹಾಗೂ **ಸಮಯ: 20/03/2025**ರ ಮಧ್ಯಾಹ್ನ **3:00** ಗಂಟೆ.

**ನಿಬಂಧನೆಗಳು** : ಷರತ್ತು/ನಿಬಂಧನೆಗಳಿಗೆ, ಹಾಗೂ ಹೆಚ್ಚಿನ ಮಾಹಿತಿಗಾಗಿ ಕೆಲಸದ ದಿನಗಳಲ್ಲಿ ಗ್ರಾಮ ಪಂಚಾಯತ ಬೀಡನಾಳ ದಿಂದ ಮಾಹಿತಿ ಪಡೆಯಬಹುದಾಗಿದೆ.

**ಸಹಿ/- ಪಂಚಾಯತ ಅಭಿವೃದ್ಧಿ ಅಧಿಕಾರಿಗಳು ಗ್ರಾಮ ಪಂಚಾಯತ ಬೀಡನಾಳ**

**ಸಹಿ/- ಅಧ್ಯಕ್ಷರು ಗ್ರಾಮ ಪಂಚಾಯತ ಬೀಡನಾಳ**

ವಾ.ಸಾ.ಇ/ಗದಗ/684/ದೇಶಪಾಂಡೆಪಬ್ಲಿಸಿಟಿ/2024-25


# ಶ್ರೀ ಹನುಮಾನ ಚಾಲೀಸ್ ಪಠಣ ಯಶಸ್ವಿ



■ ವಿಜಯಸಾಕ್ಷಿ ಸುದ್ದಿ, ಗದಗ

ಶ್ರೀಕ್ಷೇತ್ರ ಹೆಬ್ಬಳ್ಳಿಯ ಚೈತನ್ಯಾಶ್ರಮ ಇವರ ಅನುಗ್ರಹದಿಂದ ಶ್ರೀ ಶಂಕರ ಮಠ ಸೇವಾ ಸಮಿತಿ ಗದಗ ಇವರ ಸಹಯೋಗದೊಂದಿಗೆ ಜಿಲ್ಲಾ ಬ್ರಾಹ್ಮಣ ಸಂಘದ ವತಿಯಿಂದ ಮಾ.8 ಹಾಗೂ 9ರಂದು ನಗರದ ಶ್ರೀ ಶಂಕರ ಮಠದಲ್ಲಿ 11 ಗಂಟೆಗಳ ಅಖಂಡ ಶ್ರೀ ಹನುಮಾನ ಚಾಲೀಸ್ ಪಠಣ ಕಾರ್ಯಕ್ರಮ ವಿಜೃಂಭಣೆಯಿಂದ ನೆರವೇರಿತು.

ಕಾರ್ಯಕ್ರಮದ ಯಶಸ್ವಿಗೆ ಸಹಕರಿಸಿದ ಗದಗ ಜಿಲ್ಲೆಯ ಸಮಸ್ತ ವಿಪ್ರ ಬಾಂಧವರಿಗೆ, ಸಹಾಯ-ಸಹಕಾರ ನೀಡಿದ ಶ್ರೀ ರಾಮದೇವರ, ಶ್ರೀಹನುಮಂತ ದೇವರ ಸಮಸ್ತ ಭಕ್ತರಿಗೆ, ಚೈತನ್ಯಾಶ್ರಮದ ಪರಮ ಪೂಜ್ಯ ಶ್ರೀ ದತ್ತಾವಧೂತ ಗುರುಗಳಿಗೆ ಅಧ್ಯಕ್ಷರು, ಪದಾಧಿಕಾರಿಗಳು ಹಾಗೂ ಸರ್ವ ಸದಸ್ಯರು ಅಭಿನಂದನೆಗಳನ್ನು ತಿಳಿಸಿದ್ದಾರೆ.


**ಗ್ರಾಮ ಪಂಚಾಯತ ಕಾರ್ಯಾಲಯ, ಚಿಕ್ಕಹಂದಿಗೋಳ**

ತಾಲೂಕ :- ಗದಗ ಜಿಲ್ಲಾ:- ಗದಗ

ಗದಗ ಸಂ.ಗ್ರಾ.ಪಂ.ಚಿ/ಮ.ಗಾಂ.ರಾ.ಗ್ರಾ.ಉ.ಖಾ.ಯೋಜನೆ/ದರಪಟ್ಟಿ/2024-25 ದಿ:-11/03/2025

**: ದರಪಟ್ಟಿ ಪ್ರಕಟಣೆ :**

ಅಧ್ಯಕ್ಷರು/ಅಭಿವೃದ್ಧಿ ಅಧಿಕಾರಿಗಳು ಗ್ರಾಮ ಪಂಚಾಯತ ಚಿಕ್ಕಹಂದಿಗೋಳ ಇವರು 2024- 25ನೇ ಸಾಲಿನ ಮಹಾತ್ಮಗಾಂಧೀ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ ಅಡಿಯಲ್ಲಿ ಈ ಕೆಳಕಂಡ ಕಾಮಗಾರಿಗಳಿಗೆ ಅವಶ್ಯಕವಿರುವ ಐಟಂವಾರು ಸಾಮಗ್ರಿ ಮೊತ್ತಕ್ಕೆ ಸಾಮಗ್ರಿಗಳನ್ನು ಪೂರೈಸಲು ನೋಂದಾಯಿತ ಅರ್ಹ ವೆಂಡರ್/ಏಜೆನ್ಸಿಗಳಿಂದ ದರಪಟ್ಟಿಗಳನ್ನು ಆಹ್ವಾನಿಸಲಾಗಿದೆ. ಸದರಿ ಕಾಮಗಾರಿಗಳಿಗೆ ದರಪಟ್ಟಿ ಸಲ್ಲಿಸುವವರು ಗ್ರಾಮ ಪಂಚಾಯತಿಯಿಂದ ಖುದ್ದಾಗಿ ಖಾಲಿ ಟೆಂಡರ್ ಫಾರಂಗಳನ್ನು ಪಡೆದು ಸಲ್ಲಿಸತಕ್ಕದ್ದು.

| ಕ್ರ.ಸಂ. | ಕಾಮಗಾರಿ ಹೆಸರು | ಟೆಂಡರ್ ಮೊತ್ತ | ಖಾಲಿ ಟೆಂಡರ್ ಫಾರಂ ಬೆಲೆ (ರೂ. ಗಳಲ್ಲಿ) | ಷರಾ |
|---|---|---|---|---|
| 1 | ಚಿಕ್ಕಹಂದಿಗೋಳ ಗ್ರಾಮದ ಸ.ಹಿ.ಪ್ರಾ.ಶಾಲಾ ಮೈದಾನ ಅಭಿವೃದ್ಧಿಪಡಿಸುವುದು | 1,16,027.00 | 500 | ಖಾಲಿ ಟೆಂಡರ್ ಗ್ರಾಮ ಪಂಚಾಯತಿಯಿಂದ ಪಡೆಯತಕ್ಕದ್ದು. |
| 2 | ಚಿಕ್ಕಹಂದಿಗೋಳ ಗ್ರಾಮದ ಸ.ಹಿ.ಪ್ರಾ.ಶಾಲಾ ಮೈದಾನಕ್ಕೆ ರನ್ನಿಂಗ್ ಟ್ರಾಕ್ ಹಾಕುವುದು | 3,97,941.00 | 500 | |
| 3 | ಚಿಕ್ಕಹಂದಿಗೋಳ ಗ್ರಾಮದ ಚಾಕರಿ ದಾರಿ ರಸ್ತೆ ಅಭಿವೃದ್ಧಿಪಡಿಸುವುದು | 4,11,604.00 | 500 | |
| 4 | ಚಿಕ್ಕಹಂದಿಗೋಳ ಗ್ರಾಮದ ಬಸವರಾಜ ಬಾರಿಕಾಯಿಯವರ ಮನೆಯಿಂದ ಮುಖ್ಯ ರಸ್ತೆವರೆಗೆ ಸಿ.ಸಿ.ರಸ್ತೆ ನಿರ್ಮಾಣ | 62,603.00 | 500 | |
| 5 | ಚಿಕ್ಕಹಂದಿಗೋಳ ಗ್ರಾಮದ ಫಕ್ಕೀರಪ್ಪ ಬಾಬಣ್ಣವರ ಮನೆಯಿಂದ ದೊಡ್ಡನಾಗಪ್ಪ ಕಿತ್ತೂರವರ ಮನೆವರೆಗೆ ಸಿ.ಸಿ.ರಸ್ತೆ ನಿರ್ಮಾಣ | 63,020.00 | 500 | |
| 6 | ಚಿಕ್ಕಹಂದಿಗೋಳ ಗ್ರಾಮದ ಪಾಂಡುರಂಗ ದೇವಸ್ಥಾನದ ಹತ್ತಿರದ ಕಮಾನಿನಿಂದ ಪಶ್ಚಿಮ ಭಾಗದ ಕಲ್ಲು ಕಟ್ಟಡದ ಎರಡೂ ಬದಿ ಚರಂಡಿ | 194924.83 | 500 | |

ಅರ್ಹ ವೆಂಡರ್/ಏಜೆನ್ಸಿಗಳಿಂದ ಖಾಲಿ ದರಪಟ್ಟಿ ಫಾರಂಗಳಿಗಾಗಿ ಅರ್ಜಿ ವಿತರಿಸುವ ದಿನಾಂಕ: 12/03/2025 ರಿಂದ 19-03-2025 ರವರೆಗೆ, ಭರ್ತಿ ಮಾಡಿದ ದರಪಟ್ಟಿಗಳನ್ನು ಸ್ವೀಕರಿಸುವ ದಿನಾಂಕ: 19/03/2025 ಮುಂಜಾನೆ 10.00 ಗಂಟೆಯಿಂದ ಮಧ್ಯಾಹ್ನ 2.30 ಗಂಟೆವರೆಗೆ. ತೆರೆಯುವ ದಿನಾಂಕ ಹಾಗೂ ಸಮಯ: 20/03/2025 ರ ಮಧ್ಯಾಹ್ನ 3.00 ಗಂಟೆ

ನಿಬಂಧನೆಗಳು :

1) ಷರತ್ತು/ನಿಬಂಧನೆಗಳಿಗೆ, ಹೆಚ್ಚಿನ ಮಾಹಿತಿಗಾಗಿ ಕೆಲಸದ ದಿನಗಳಲ್ಲಿ ಹಾಗೂ ರಜಾ ದಿನಗಳನ್ನು ಹೊರತುಪಡಿಸಿ ಗ್ರಾಮ ಪಂಚಾಯತ ಚಿಕ್ಕಹಂದಿಗೋಳದ ಮಾಹಿತಿ ಪಡೆಯಬಹುದಾಗಿದೆ.

ಸಹಿ ಆಗಿದೆ/- **ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು** ಗ್ರಾಮ ಪಂಚಾಯತಿ ಚಿಕ್ಕಹಂದಿಗೋಳ

ಸಹಿ ಆಗಿದೆ/- **ಅಧ್ಯಕ್ಷರು** ಗ್ರಾಮ ಪಂಚಾಯತಿ ಚಿಕ್ಕಹಂದಿಗೋಳ


VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka